ವಿಜಯಪುರ | ಸಂಪುಟ 01 | ಸಂಚಿಕೆ 230 | ಪುಟ 4 | ₹ 3.00
https://udayarashminews.com
udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com | Title Code: KARKAN28047 | ಶನಿವಾರ, ನವೆಂಬರ್ 4, 2023



“ವಿಜಯಪುರ ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇರುವುದರಿಂದ ಉದ್ಭವಿಸಬಹುದಾದ ಸಮಸ್ಯೆಗಳನ್ನು ಯೋಜನಾಬದ್ಧವಾಗಿ ಹಾಗೂ ವ್ಯವಸ್ಥಿತವಾಗಿ ಯಾವುದೇ ಸಮಸ್ಯೆ ಬಾರದ ರೀತಿಯಲ್ಲಿ ನಿರ್ವಹಿಸಬೇಕು.”

– ಡಾ.ರಿಚರ್ಡ್ ವಿನ್ಸೆಂಟ್ ಡಿಸೋಜ್
ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ

ಮಾಜಿ ಸಿಎಂ ಯಡಿಯೂರಪ್ಪ ಒತ್ತಾಯ | ಪಕ್ಷ ಸಂಘಟಿಸುವ ಸಾಮರ್ಥ್ಯ | ಪಕ್ಷ ಸಂಘಟಿಸಲು ಮುಂದಾಗುವ ಬಿಎಸ್ವೈ

# ಬಿಜೆಪಿ ರಾಜ್ಯಾಧ್ಯಕ್ಷ: ಮುನ್ನೆಲೆಗೆ ವಿಜಯೇಂದ್ರ ಹೆಸರು

ಬೆಂಗಳೂರು: ಕರ್ನಾಟಕದ ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆ ವಿಚಾರ ಮತ್ತೆ ಮುನ್ನೆಲೆಗೆ ಬಂದಿದೆ. ಬಿಜೆಪಿಯವರು ರಾಜ್ಯಾಧ್ಯಕ್ಷ ಹಾಗೂ ವಿಪಕ್ಷ ನಾಯಕರನ್ನು ಘೋಷಣೆ ಮಾಡದಿರುವುದು ಅವರಿಗೆ ಬಹುದೊಡ್ಡ ಹಿನ್ನಡೆಗೂ ಕಾರಣವಾಗಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಹುದ್ದೆಗೆ ಯಾರನ್ನು ಆಯ್ಕೆ ಮಾಡಬೇಕು ಎಂಬ ಬಗ್ಗೆ ಹಲವು ಸುತ್ತಿನ ಮಾತುಕತೆಗಳು ನಡೆದರೂ ಹೈಕಮಾಂಡ್ ಮಾತ್ರ ನೇಮಕಾತಿಗೆ ಮೀನಮೇಷ ಎಣಿಸುತ್ತಿದೆ. ಈ ನಿಟ್ಟಿನಲ್ಲಿ ಯಾರು ಅಧ್ಯಕ್ಷ ಆಗಬೇಕು ಎಂಬ ಬಗ್ಗೆ ಇನ್ನು ಗೊಂದಲ ಮುಂದುವರೆದಿದೆ. ಈಗಾಗಲೇ ಕೇಳಿ ಬಂದಿರುವಂತೆ ಬಿಎಸ್ ಯಡಿಯೂರಪ್ಪ ಅವರ ಮಗ ಶಾಸಕ ಬಿವೈ ವಿಜಯೇಂದ್ರ ಅವರ ಹೆಸರು ಈ ಹುದ್ದೆಗೆ ಕೇಳಿ ಬಂದಿದೆ.

ಕರ್ನಾಟಕದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಲಿಂಗಾಯತ ಸಮುದಾಯದ ಕೋಪವೇ ಕಾರಣ ಎಂಬ ಬಗ್ಗೆ ಮಾತುಗಳು ಕೇಳಿ ಬಂದ ಹಿನ್ನೆಲೆಯಲ್ಲಿ ರಾಜ್ಯಾಧ್ಯಕ್ಷ ಹುದ್ದೆಯನ್ನು ಬಿವೈ ವಿಜಯೇಂದ್ರ ಅವ-ರಿಗೆ ನೀಡಬೇಕು ಎಂದು ಎಲ್ಲೆಡೆ ಆಗ್ರಹ ಕೇಳಿ ಬಂದಿದೆ. ಮಾಜಿ ಸಿಎಂ ಯಡಿಯೂರಪ್ಪ ಅವರನ್ನು ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ವಿಜಯೇಂದ್ರರನ್ನು ಆಯ್ಕೆ ಮಾಡುವಂತೆ ಒತ್ತಾಯಿಸಿದ್ದರು ಎನ್ನಲಾಗಿದೆ.

ಈ ಮಧ್ಯೆ ರಾಜ್ಯಾಧ್ಯಕ್ಷ ಹುದ್ದೆಗೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರನ್ನು ನೇಮಿಸಲಾಗುತ್ತದೆ ಎಂದು ಮಾತುಗಳು ಕೇಳಿ ಬಂದಿದ್ದವು. ಆದರೆ ಅವರು ನಾನು ಇಲ್ಲೇ ಸಂತಸದಿಂದ ಇದ್ದೇನೆ. ನನಗೆ ರಾಜ್ಯ ಅಧ್ಯಕ್ಷ ಹುದ್ದೆ ಬೇಕಿಲ್ಲ ಎಂದು ಹೇಳಿದ್ದರು. ಈ ಹಿನ್ನೆಲೆಯಲ್ಲಿ ಮತ್ತೆ ಬಿವೈ ವಿಜಯೇಂದ್ರ ಅವರ ಹೆಸರು ಮತ್ತೆ ಕೇಳಿ ಬಂದಿದೆ.

ವಿಜಯೇಂದ್ರ ಅವರ ಆಯ್ಕೆಯು ಮುಂಬರುವ ಲೋಕಸಭಾ ಚುನಾವಣೆ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ. ಏಕೆಂದರೆ ಕರ್ನಾಟಕ ವಿಧಾನಸಭಾ ಚುನಾವಣೆಯಲ್ಲಿ ಲಿಂಗಾಯತ ಸಮುದಾಯದಕ್ಕೆ ಸೇರಿದ ಬಿಎಸ್ ಯಡಿಯೂರಪ್ಪ ಅವರ ಕಡಗಣನೆಯಿಂದ ಅಧಿಕಾರ ಕಳೆದುಕೊಳ್ಳುವಂತಾಯಿತು ಎಂದು ವಿಶ್ಲೇಷಣೆಗಳು ಕೇಳಿ ಬಂದಿದ್ದವು. ಹೀಗಾಗಿ ಮುಂದೆಯೂ ಅದೇ ತಪ್ಪುಗಳನ್ನು ಹೈಕಮಾಂಡ್ ಮಾಡಬಾರದು ಎಂಬ ಆಗ್ರಹಗಳು ಕೇಳಿ ಬಂದಿವೆ.





ಇದಕ್ಕಾಗಿ ಪಕ್ಷದಲ್ಲಿರುವ ಆರ್-ಎಸ್‌ಎಸ್ ನಾಯಕರ ಗತಿ ಏನು ಎಂಬ ಪ್ರಶ್ನೆ ಇಲ್ಲಿ ಬರುತ್ತದೆ. ವಿಧಾನಸಭಾ ಚುನಾವಣೆಯಲ್ಲಿ ಆರ್‌ಎಸ್‌ಎಸ್ ನಾಯಕರ ಮಾತು ಕೇಳಿ ಯಡಿಯೂರಪ್ಪ ಅವರ ಕಡೆಗಣನೆ ಮಾಡಿದ ಪರಿಣಾಮ ಪಕ್ಷ ಹೀನಾಯ ಸೋಲು ಕಂಡಿತು ಎಂಬುದು ಎಲ್ಲರ ಅಭಿಮತ. ಆದ-ರಿಂದ ಬಿವೈ ವಿಜಯೇಂದ್ರರನ್ನು ರಾಜ್ಯಾಧ್ಯಕ್ಷ ಮಾಡಲು ಯಡಿಯೂರಪ್ಪ ಮುಂದಾಗಿದ್ದಾರೆ. ಅಲ್ಲದೆ ವಿಜಯೇಂದ್ರ ರಾಜ್ಯದಾದ್ಯಂತ ಓಡಾಡಿ ಪಕ್ಷ ಸಂಘಟಿಸುವ ಸಾಮರ್ಥ-್ಯ ಹೊಂದಿದ್ದಾರೆ ಎಂದು ಹೇಳಲಾಗಿದೆ.

ಹೀಗಾಗಿ ಬಿಎಸ್ ಯಡಿಯೂರಪ್ಪ ಅವರು ಮತ್ತೆ □□□ಕ್ಟಿವ್ ಆಗಿ ಬರ ಪರಿಸ್ಥಿತಿ ಅಧ್ಯಯನ ಯಾತ್ರೆ ಮಾಡಲು ಮುಂದಾಗಿದ್ದಾರೆ. ವಿಜಯೇಂದ್ರನನ್ನು ರಾಜ್ಯಾಧ್ಯಕ್ಷ ಮಾಡಲು ಹಾಗೂ ವಿಪಕ್ಷ ನಾಯಕನ ನೇಮಕಕ್ಕೆ ಬಿಜೆಪಿ ಹೈಕಮಾಂಡ್ ಮೇಲೆ ಒತ್ತಡ ಹೇರುವುದಾಗಿ ಯಡಿಯೂರಪ್ಪ ಹೇಳಿದ್ದಾರೆ.

ಈಗ ಹೈಕಮಾಂಡ್ ಬಿಎಸ್ ಯಡಿಯೂರಪ್ಪನವರ ಮಾತು ಕೇಳಬೇಕಾಗಿದೆ. ಮುಂದಿನ ವರ್ಷವೇ ಲೋಕಸಭಾ ಚುನಾವಣೆ ಇರುವುದರಿಂದ ಬಿಜೆಪಿ ಅವರನ್ನು ಮತ್ತೆ ಕಡೆಗಣಿಸುವಂತಿಲ್ಲ, ಬಿವೈ ವಿಜಯೇಂದ್ರರಿಗೆ ರಾಜ್ಯಾಧ್ಯಕ್ಷ ಹುದ್ದೆ ಕೊಟ್ಟರೆ ಯಡಿಯೂರಪ್ಪ ಅವರು ಪಕ್ಷ ಸಂಘಟಿಸಲು ಮುಂದಾಗುತ್ತಾರೆ. ಇಲ್ಲದಿದ್ದರೆ ಮತ್ತೆ ಕಾಂಗ್ರೆಸ್‌ಗೆ ಪರೋಕ್ಷವಾಗಿ ಲಾಭವಾಗುತ್ತದೆ ಎಂಬುದು ಎಲ್ಲರ ಮಾತು.


ಈಗಾಗಲೇ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 20 ಸ್ಥಾನ ಗೆಲ್ಲುತ್ತದೆ ಎಂದು ಕಾಂಗ್ರೆಸ್ ಹೇಳುತ್ತಿದೆ. ಬಿಜೆಪಿಯಲ್ಲಿ ಸರಿಯಾದ ಅಧಿಕಾರ ಸೂತ್ರ ಹಂಚಿಕೆಯಾಗದಿದ್ದರೆ ಆ ಸ್ಥಾನಗಳು ಬಂದರೂ ಆಶ್ಚರ್ಯವಿಲ್ಲ. ಇದಲ್ಲದೆ ವಿಪಕ್ಷ ನಾಯಕರ ಆಯ್ಕೆಯೂ 6 ತಿಂಗಳಿಂದ ಖಾಲಿ ಇದೆ. ಇಲ್ಲಿಗೂ ನೇಮಕ ಆಗಬೇಕಿದೆ.

ವಾಡಿಕೆಯಂತೆ ಹಿಂದೆ ಸಿಎಂ ಆಗಿದ್ದವರು ವಿಪಕ್ಷ ನಾಯಕನಾಗುವುದು ಸರಿ. ಆದರೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಶಸ್ತ್ರಚಿಕಿತ್ಸೆಗೆ ಒಳಗಾಗಿರುವುದರಿಂದ ಅವರು ಆಗುವುದಿಲ್ಲ. ಬದಲಿಗೆ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಕಾರ್ಕಳ ಶಾಸಕ ಸುನೀಲ್ ಕುಮಾರ್ ಅವರ ಹೆಸರು ಈ ಸ್ಥಾನಕ್ಕೆ ಈಗ ಕೇಳಿ ಬಂದಿದೆ.

## ರಾಜ ನುಡಿ

ಕಪ್ಪುಮಣ್ಣಿನ ಎರೆ ಭೂಮಿ,
ಬಿಳಿ ಬಣ್ಣದ ಹತ್ತಿಯನ್ನು,
ಕೊಡುವುದಾದರೆ,
ಕರಿ ಬಣ್ಣದ ಎಮ್ಮೆ ಬಿಳಿ
ಹಾಲನ್ನು ಕೊಡಬಲ್ಲುದಾದರೆ,
ಕಾರಿರುಳ ರಾತ್ರಿಯು,
ಬಣ್ಣದ ಕನಸುಗಳನ್ನು
ತೋರಿಸುವುದಾದರೆ,
ಕಷ್ಟಗಳು ಸುಖವನ್ನು
ತೋರಿಸಲಾರವೇ! ಸೋಲು
ಗೆಲುವನ್ನು ತರಲಾರದೇ!
ಜೀವನ ವೈರುಧ್ಯಗಳ ಆಟ.
ಭರವಸೆ ಇರಲಿ.

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 226

### ಜಗವ ಸುತ್ತಿಪ್ಪುದು ನಿನ್ನ ಮಾಯೆಯಯ್ಯಾ

*ಜಗವ ಸುತ್ತಿಪ್ಪುದು ನಿನ್ನ ಮಾಯೆಯಯ್ಯಾ,*
*ನಿನ್ನ ಸುತ್ತಿಪ್ಪುದು ಎನ್ನ ಮನ ನೋಡಯ್ಯಾ.*
*ನೀನು ಜಗಕ್ಕೆ ಬಲ್ಲಿದನು, ಆನು ನಿನಗೆ ಬಲ್ಲಿದನು, ಕಂಡಯ್ಯಾ.*
*ಕರಿಯು ಕನ್ನಡಿಯೊಳಗಡಗಿದಂತಯ್ಯಾ,*
*ಎನ್ನೊಳಗೆ ನೀನಡಗಿದೆ ಕೂಡಲಸಂಗಮದೇವಾ.*
*– ಬಸವಣ್ಣನವರು*

ಜಗತ್ತಿನ ಚಾಲನಾ ಶಕ್ತಿ ಯಾವುದು ಎಂಬುದನ್ನು 12ನೇ ಶತಮಾನದಲ್ಲಿಯೇ ಬಸವಣ್ಣನವರು ಅರಿತಿದ್ದರು ಎಂಬುದಕ್ಕೆ ಈ ವಚನವು ಸಾಕ್ಷಿಯಾಗಿದೆ. ಇಲ್ಲಿ ಮಹಾಲಿಂಗ ಸ್ವರೂಪಿ ಪರಮಾತ್ಮನು ಬ್ರಹ್ಮಾಂಡಲ್ಲಿನ ಪ್ರತಿಯೊಂದು ಅಣುರೇಣು ತೃಣಕಾಷ್ಟಗಳನ್ನು ವ್ಯವಸ್ತಿತವಾಗಿ ಜೋಡಿಸಿ ಅವುಗಳಿಗೊಂದು ಕ್ರಮಭರಿತ ಜೀವನ ವಿಧಾನವನ್ನು ನೀಡಿ ಚಲನೆಯಲ್ಲಿಟ್ಟಿದ್ದಾನೆ. ಈ ವ್ಯವಸ್ಥೆಯ ವಿಧಾನವನ್ನು ಅರಿಯುವಲ್ಲಿ ವಿಜ್ಞಾನಿಗಳು ಮತ್ತು ದಾರ್ಶನಿಕರು (ವಿಜ್ಞಾನ ಮತ್ತು ಆದ್ಯಾತ್ಮಗಳ) ವಿವಿಧ ಕ್ರಮಗಳಲ್ಲಿ ವಿಭಿನ್ನ ಮಾರ್ಗಗಳನ್ನು ಕ್ರಮಿಸಿದ್ದರೆ. ಬಸವಾದಿ ಶರಣರು ಎರಡೂ ಮಾರ್ಗಗಳನ್ನು ಎಕೀಕರಿಸಿದ ಪರಿಣಾಮವಾಗಿ ವಚನಗಳಲ್ಲಿ ನಾವು ವೈಜ್ಞಾನಿಕ ವಿಚಾರಗಳನ್ನು ಕಾಣುತ್ತೇವೆ. ಈ ವಚನದಲ್ಲಿ ಅಣುವಿನಲ್ಲಿನ ಅಣುಶಕ್ತಿಯು ಹಾಗೂ ಬ್ರಹ್ಮಾಂಡದ ಕಾಸ್ಮಿಕ್ ಶಕ್ತಿಯು ಒಂದೇ ಎಂಬ ಆದ್ಯಾಂತಿಕ ಸತ್ಯವನ್ನು ಅರಿತ ಬಸವಣ್ಣನವರು ನೀನು ಜಗಕ್ಕೆ ಬಲ್ಲಿದನು, ಆನು ನಿನಗೆ ಬಲ್ಲಿದನು ಎನ್ನುವುದರೊಂದಿಗೆ ಎನ್ನೊಳಗಿನ ಚೈತನ್ಯಶಕ್ತಿ ನೀನೆ ದೇವಾ ಎಂದಿದ್ದಾರೆ. (ದೈತ್ಯ ಆನೆಯು ಪುಟ್ಟ ಕನ್ನಡಿಯಲ್ಲಿ ಕಾಣುವ ತೆರದಿ)

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

## ಬೆಂಗಳೂರಿನ ಯೂತ್ ಫೋಟೋಗ್ರಫಿ ಸೋಸೈಟಿ ಆಯೋಜಿಸಿದ ಅಂತರರಾಷ್ಟ್ರೀಯ ಛಾಯಾಚಿತ್ರ ಸ್ಪರ್ಧೆ

# ಚಿನ್ನದ ಪದಕಕ್ಕೆ ಭಾಜನರಾದ ಸತೀಶ ಕಲಾಲ



ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಯುವ ಛಾಯಾಗ್ರಾಹಕ ವಿಜಯಪುರ ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘದ ಕಾರ್ಯದರ್ಶಿ ಸತೀಶ ಕಲಾಲ ಅವರಿಗೆ ಬೆಂಗಳೂರಿನ ಯೂತ್ ಫೋಟೋಗ್ರಫಿ ಸೋಸೈಟಿಯು ಆಯೋಜಿಸಿದ ಅಂತರರಾಷ್ಟ್ರೀಯ ಛಾಯಾಚಿತ್ರ ಸ್ಪರ್ಧೆಯಲ್ಲಿ ಕಪ್ಪು ಬಿಳುಪು ವಿಭಾಗದ ಸ್ಪರ್ಧೆಯಲ್ಲಿ ಚಿನ್ನದ ಪದಕದ ಬಹುಮಾನಕ್ಕೆ ಭಾಜನರಾಗಿ ನಮ್ಮ ಜಿಲ್ಲೆಗೆ ಮತ್ತು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ ಎಂದು ಜಿಲ್ಲಾ ನೂತನ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ರಮೇಶ ಚವ್ಹಾಣ ಹರ್ಷ ವ್ಯಕ್ತಪಡಿಸಿದ್ದಾರೆ.

ಈಗಾಗಲೆ ಹಲವಾರು ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದ ಪ್ರಶಸ್ತಿಗಳನ್ನು ಪಡೆದ ಸತೀಶ ಕಲಾಲ ಅವರು, ಈ ಬಾರಿ ಅಂತರರಾಷ್ಟ್ರೀಯ ಪ್ರಶಸ್ತಿ ಪಡೆದವರಾಗಿದ್ದು ಇವರು ಕ್ಲಿಕ್ಕಿಸಿದ ಗ್ರಾಮೀಣ ಭಾಗದಲ್ಲಿ ಅಣ್ಣ ತಂಗಿಯರು ಸಂತೋಷದಿಂದ ಆಟವಾಡುತಿದ್ದ ಛಾಯಾಚಿತ್ರವನ್ನು ದೃಶ್ಯ ಸಂಯೋಜನೆ, ನೆರಳು ಬೆಳಕಿನ ಸಂಯೋಜನೆಯ ಕೌಶಲಗಳನ್ನು ಹೊಂದಿದ ಚಿತ್ರಕ್ಕೆ ಚಿನ್ನದ ಪದಕ ದೊರೆತಿದೆ.

ಇಟಲಿ, ಟರ್ಕಿ, ಸೌದಿ, ಜರ್ಮನಿ ಸಹಿತ ಭಾರತದ ಶ್ರೇಷ್ಠ ಛಾಯಾಗ್ರಾಹಕರು ಈ ಸ್ಪರ್ಧೆಯ ನಿರ್ಣಾಯಕರಾಗಿದ್ದರು. ಸತೀಶ ಕಲಾಲ ಅವರ ಛಾಯಾಚಿತ್ರಕ್ಕೆ ಮೆಚ್ಚಿಗೆ ವ್ಯಕ್ತಪಡಿಸಿ ಬಂಗಾರದ ಪದಕಕ್ಕೆ ಆಯ್ಕೆಮಾಡಿದ್ದಾರೆ.

ಬಂಗಾರದ ಪದಕಕ್ಕೆ ಭಾಜನರಾದ ಸತೀಶ ಕಲಾಲ ಅವರಿಗೆ ಕರ್ನಾಟಕ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ಎಚ್.ಎಸ್.ನಾಗರಾಜ ಮತ್ತು ಜಿಲ್ಲಾ ಛಾಯಾಗ್ರಾಹಕರ ಸಂಘದ ಅಧ್ಯಕ್ಷ ರಮೇಶ ಚವ್ಹಾಣ, ಉಪಾಧ್ಯಕ್ಷ ಪ್ರಶಾಂತ ಪಟ್ಟಣಶೆಟ್ಟಿ, ಖಜಾಂಚಿ ಸುರೇಶ ರಾಠೋಡ, ನಿರ್ದೇಶಕರಾದ ರಾಜುಸಿಂಗ ರಜಪೂತ, ಗುರುಬಾಳಪ್ಪ ಗಲಗಲಿ, ಮಲ್ಲಿಕಾರ್ಜುನ ಪಾರ್ವತಿ, ಪವನಕುಮಾರ ಅಂಗಡಿ, ಸಂಜೀವ ಕುಂಬಾರ ಛಾಯಾಗ್ರಾಹಕರಾದ ಅನಂತ ಭೋಸಲೆ, ಸೂಗುರೇಶ ಗಲ್ಲಿ ಅಭಿನಂದಿಸಿದ್ದಾರೆ.




# ಅನಧಿಕೃತ ಮದ್ಯ ಮಾರಾಟ ತಡೆಗೆ ಮಹಿಳೆಯರ ಆಗ್ರಹ



ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ತಾಲೂಕಿನ ಚಟ್ನಳ್ಳಿ ಗ್ರಾಮದಲ್ಲಿ ಅನಧಿಕೃತ ಮದ್ಯ ಮಾರಾಟ ಮಾಡುವುದನ್ನು ತಡೆಯಲು ಆಗ್ರಹಿಸಿ ಗ್ರಾಮದ ಸರಸ್ವತಿ ಮಹಿಳಾ ಸ್ವಸಹಾಯ ಸಂಘ, ಕರ್ನಾಟಕ ಅಂಬೇಡ್ಕರ್ ಸೇನೆಯ ಪದಾಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಸದಸ್ಯೆ ಸೇರಿ ಶಿರಸ್ತೇದಾರ ಸುರೇಶ ಮ್ಯಾಗೇರಿ ಅವರಿಗೆ ಮನವಿ ಸಲ್ಲಿಸಿದರು.

ತಾಲ್ಲೂಕಿನ ಚಟ್ನಳ್ಳಿ ಗ್ರಾಮದ ಮಹಿಳೆಯರು, ಕರ್ನಾಟಕ ಅಂಬೇಡ್ಕರ್ ಸೇನೆಯ ಪದಾಧಿಕಾರಿಗಳು ಶುಕ್ರವಾರ ತಹಶೀಲ್ದಾರ ಕಚೇರಿಗೆ ಆಗಮಿಸಿ ತಮಗೆ ನ್ಯಾಯ ದೊರಕಿಸಿಕೊಡಲು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಗ್ರಾಮದ 8ನೇ ವಾರ್ಡಿನ ಸದಸ್ಯೆ ತನುಶ್ರೀ ಶರಣಗೌಡ ಪಾಟೀಲ, ಸರಸ್ವತಿ ಮಹಿಳಾ ಸ್ವಸಹಾಯ ಸಂಘದ ಅಧ್ಯಕ್ಷೆ ಮರೆವ್ವ ಹರಿಜನ ಹಾಗೂ ದಲಿತ ಸಂಘರ್ಷ ಸಮಿತಿಯ ಬೆಳಗಾವಿ ವಿಭಾಗೀಯ ಸಂಚಾಲಕ ರಾವುತ ತಳಕೇರಿ ಮಾತನಾಡಿ, ಗ್ರಾಮದಲ್ಲಿ ಕಳೆದ ಹಲವು ದಿನಗಳಿಂದ ಕಿರಾಣಿ, ಚಹಾ, ಪಾನ್ ಅಂಗಡಿಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದೆ. ಸುಮಾರು 3 ಸಾವಿರ ಜನಸಂಖ್ಯೆ ಹೊಂದಿರುವ ಗ್ರಾಮದಲ್ಲಿ ಕೃಷಿ ಅವಲಂಬಿತ ಕುಟುಂಬಗಳೇ ಹೆಚ್ಚಾಗಿವೆ. ಇವರ ದಿನದ ಆದಾಯ ಎರಡು ನೂರುಗಳಾಗಿದ್ದು, ಈಗ ಕುಟುಂಬದ ಪುರುಷರು ತಾವು ದುಡಿದು ತಂದ ಹಣವನ್ನು ಕುಡಿತಕ್ಕೆ ಖರ್ಚು ಮಾಡುತ್ತಿದ್ದಾರೆ. ಈ ಕುರಿತು ತಾಯಿ, ಹೆಂಡತಿ ಪ್ರಶ್ನಿಸಿದರೆ ಅವರ ಮೇಲೆ ಕೈ ಮಾಡುವುದಕ್ಕೆ ಹಿಂಜರಿಯುವುದಿಲ್ಲ. ಹೀಗಾದರೆ ಬಡಕುಟುಂಬಗಳು ಬದುಕುವುದಾದರೂ ಹೇಗೆ ಎಂದು ಆತಂಕ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ಅನಧಿಕೃತವಾಗಿ ಮದ್ಯ ಮರಾಟ ಮಾಡುವುದರ ಕು-ರಿತು ಗ್ರಾಮ ಪಂಚಾಯಿತಿ ಹಾಗೂ ಅಬಕಾರಿ ಇಲಾಖೆಯ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಮಾಡಿದ್ದರೂ ಪ್ರಯೋಜನವಾಗಿಲ್ಲ. ಮುಂದಿನ ದಿನಗಳಲ್ಲಿ ಅಕ್ರಮ ಮಾರಾಟದ ಕುರಿತು ಕ್ರಮ ಕೈಗೊಳ್ಳದೇ ಇದ್ದಲ್ಲಿ ಮಕ್ಕಳೊಂದಿಗೆ ಆಗಮಿಸಿ ತಹಶೀಲ್ದಾರ ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಉಪವಾಸ ಸತ್ಯಾಗ್ರಹ ಕೈಗೊಳ್ಳಲಾಗುವುದು ಎಂದು ಎಚ್ಚ-ರಿಸಿದರು. ನಂತರ ಸಿಬ್ಬಂದಿಗೆ ಮನವಿ ಸಲ್ಲಿಸಿದರು.

ಅಕ್ಕಮಹಾದೇವಿ ಅಗಸರ, ಹಳ್ಳೆವ್ವ ಮಾದರ, ಲಕ್ಷ್ಮೀಬಾಯಿ ಹರಿಜನ, ಶೇಖಮ್ಮ ಬಿರಾದಾರ, ಶ್ರೀದೇವಿ ಹೂಗಾರ, ರೇಣುಕಮ್ಮ ಬಿರಾದಾರ, ಶಂಕ್ರೆಮ್ಮ ಹೂಗಾರ, ಶಂಕ್ರೆಮ್ಮ ಬಡಿಗೇರ, ಬೋರಮ್ಮ ಹರಿಜನ, ರಾಜಶ್ರೀ ಅಗಸರ, ಶರಣಗೌಡ ಪಾಟೀಲ, ಬಸನಗೌಡ ಪಾಟೀಲ, ಬೈರಡೆಪ್ಪ ಹದನೂರ, ರಮೇಶ ಹರಿಜನ, ಸಂಜೀವಕುಮಾರ ಪೂಜಾರಿ, ಶಂಕರಲಿಂಗ ಹೂನಳ್ಳಿ, ನಿಂಗಪ್ಪ ಹದ್ನೂರ, ಸಂಗಣ್ಣ ಸಜ್ಜನ ಸಂಗಪ್ಪ ಹದನೂರ ಸೇರಿದಂತೆ ಇತರರು ಇದ್ದರು.

## ಚೌಡೇಶ್ವರಿ ಸೌಹಾರ್ದ ಪತ್ತಿನ ಸಹಕಾರಿ ಬ್ಯಾಂಕ್ ಶಾಖೆ ಉದ್ಘಾಟನೆ | ಸಂಸದ ರಮೇಶ ಜಿಗಜಿಣಗಿ ಅಭಿಮತ

# ಎಲ್ಲ ಸಮಾಜದವರ ಬೆಂಬಲದಿಂದ ರಾಜಕೀಯ ಸಾಧ್ಯ




ಉದಯರಶ್ಮಿ ನ್ಯೂಸ್

ವಿಜಯಪುರ: ಕುಂಬಾರ ಒಂದು ಸಣ್ಣ ಸಮಾಜವಾಗಿದ್ದು, ಈ ಸಮಾಜ ಬಾಂಧವರು ಒಳ್ಳೆಯ ಜನ, ಸಂಸ್ಕಾರವಂತರು ಎಂದು ಸಂಸದ ರಮೇಶ ಜಿಗಜಿಣಗಿ ಹೇಳಿದರು.

ಶುಕ್ರವಾರ ನಗರದ ಕಂದಗಲ್ಲ ಹನುಮಂತರಾಯ ರಂಗಮಂದಿರದಲ್ಲಿ ಸಿಂದಗಿಯ ಚೌಡೇಶ್ವರಿ ಸೌಹಾರ್ದ ಪತ್ತಿನ ಸಹಕಾರಿ ಸಂಘದ ವಿಜಯಪುರ ಶಾಖೆ ಉದ್ಘಾಟನೆ ಹಾಗೂ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕುಂಬಾರಿಕೆ ಜತೆಗೆ ಒಕ್ಕಲುತನ ಮಾಡಿ ಜೀವನ ಸಾಗಿಸುತ್ತಿರುವ ಸಣ್ಣ ಸಮಾಜವಾದರೂ ಎಲ್ಲರೂ ಒಗ್ಗಟ್ಟಾಗಿದ್ದೀರಿ. ಸಮಾಜದ ಬಡವರ ಏಳ್ಗೆಗಾಗಿ ಸಹಕಾರಿ ಬ್ಯಾಂಕ್ ಆರಂಭಿಸಿ ಒಳ್ಳೆಯ ಕೆಲಸ ಮಾಡಿದ್ದೀರಿ. ಸಮಾಜದ ಬಡಜನರು ಬ್ಯಾಂಕ್ ಸದುಪಯೋಗ ಪಡೆದು ಸಾಲವನ್ನು ಸಕಾಲಕ್ಕೆ ಮರುಪಾವತಿಸಿ ಬ್ಯಾಂಕ್ ಬೆಳವಣಿಗೆಗೆ ಸಹಕರಿಸಬೇಕು ಎಂದರು.

ಈಗ ರಾಜಕೀಯದಲ್ಲಿ ಜಾತಿ ರಾಜಕಾರಣ ಹೆಚ್ಚಾಗಿದೆ. ಒಂದು ಸಮಾಜದಿಂದ ಗೆದ್ದು ಬರುತ್ತೇವೆ, ರಾಜಕೀಯ ಮಾಡುತ್ತೇವೆ ಎಂದು ಕೆಲವರು ತಿಳಿದಿದ್ದಾರೆ. ಆದರೆ, ಎಲ್ಲ ಸಮಾಜದವರಿಂದ ರಾಜಕೀಯ ಸಾಧ್ಯ. ಅದಕ್ಕೆ ನಾನೇ ಉದಾಹರಣೆ ಎಂದರು.

ಮಾಜಿ ಶಾಸಕ ರಮೇಶ ಭೂಸನೂರ ಮಾತನಾಡಿ, ಸಣ್ಣ ಸಮಾಜ ಎಂಬ ಕೀಳರಿಮೆ ಬೇಡ. ಎಲ್ಲ ಸಮಾಜದೊಂದಿಗೆ ಉತ್ತಮ ಬಾಂಧವ್ಯದೊಂದಿಗೆ ಮುನ್ನಡೆಯಬೇಕು. ಸಮಾಜದವರು ಸಂಘಟಿತರಾಗಿದ್ದೀರಿ ಎಂಬುದಕ್ಕೆ ಇಲ್ಲಿ ಸೇರಿದ ಜನಸ್ತೋಮ ನೋಡಿದರೆ ಗೊತ್ತಾಗುತ್ತದೆ. ಬ್ಯಾಂಕ್‌ನ ಸದುಪಯೋಗ ಮಾಡಿಕೊಂಡು ಸಂಘದ ಬೆಳವಣಿಗೆಗೆ ಎಲ್ಲರೂ ಸಹಕಾರ ನೀಡಬೇಕು ಎಂದರು.

ಶಾಸಕ ರಾಜುಗೌಡ ಪಾಟೀಲ ಮಾತನಾಡಿ, ಶಿಕ್ಷಣದಿಂದ ಸಾಧನೆ ಮಾಡಲು ಸಾಧ್ಯ. ಅದ್ದರಿಂದ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದರು.

ಡಿಸಿಸಿ ಬ್ಯಾಂಕ್ ನಿರ್ದೇಶಕಿ ಸಂಯುಕ್ತಾ ಪಾಟೀಲ ಮಾತನಾಡಿ, ದೇಶಕ್ಕೆ ಸಹಕಾರಿ ರಂಗದ ಕೊಡುಗೆ ದೊಡ್ಡದಿದೆ. ದೇಶದ ಆರ್ಥಿಕ ಪರಿಸ್ಥಿತಿ ಬದಲಾಗಬೇಕಾದರೆ ಅದಕ್ಕೆ ಸಾಲ ನೀಡಬೇಕು. ಕಡಿಮೆ ಬಡ್ಡಿ ದರದಲ್ಲಿ ಸಾಲ ದೊರೆತರೆ ದೇಶದ ಅಭಿವೃದ್ಧಿಗೆ ಪೂರಕವಾಗಲಿದೆ ಎಂದರು.

ಎಂಜಿನಿಯರ್ ಎಂ.ಎಂ.ಬನೋಶಿ ಅವರು ಕುಂಬಾರ ಸಮಾಜದ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಂಸದರಿಗೆ ಮನವಿ ಸಲ್ಲಿಸಿದರು.

ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ದಣ್ಣ ಸಕ್ರಿ, ಸಹಕಾರಿ ಸಂಘಗಳ ಪ್ರಭಾರ ಉಪನಿಬಂಧಕಿ ಎಸ್.ಕೆ.ಭಾಗ್ಯ ಮಾತನಾಡಿದರು.

ಸಿಂದಗಿಯ ಪ್ರಭುಸಾರಂಗದೇವ ಶಿವಾಚಾರ್ಯರು, ವಿಜಯಪುರದ ಬಸವಲಿಂಗ ಸ್ವಾಮೀಜಿ ಸಾನ್ನಿಧ್ಯವಹಿಸಿದ್ದರು. ಸಂಘದ ಅಧ್ಯಕ್ಷ ಬಿ.ಜಿ.ನಾಗೂರ ಅಧ್ಯಕ್ಷತೆ ವಹಿಸಿದ್ದರು.

# ಥೈರಾಯ್ಡ್ ಗ್ರಂಥಿ ರೋಗ ಕುರಿತು ಜಾಗೃತಿ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**



ವಿಜಯಪುರ: ಥೈರಾಯ್ಡ್ ಗ್ರಂಥಿ ರೋಗ ಕುರಿತು ಜಾಗೃತಿ ಕಾರ್ಯಕ್ರಮ ಮತ್ತು ಥೈರಾಯ್ಡ್ ಪರೀಕ್ಷೆ ಶಿಬಿರ ನಗರದ ಬಿ. ಎಲ್. ಡಿ. ಇ ಸಂಸ್ಥೆಯ ಎಸ್. ಎಸ್. ಬಾಲಕಿಯರ ಪ್ರೌಢಶಾಲೆಯಲ್ಲಿ ನಡೆಯಿತು.

ಬುಧವಾರ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ಈ ಶಿಬಿರ ನಡೆದಯಿತು.

ಆಸ್ಪತ್ರೆಯ ಶಸ್ತ್ರಚಿಕಿತ್ಸೆ ವಿಭಾಗದ ಡಾ. ಗಿರೀಶ ಕುಲ್ಲೊಳ್ಳಿ ಮಾತನಾಡಿ, ಕಾಯಿಲೆಯ ಮುನ್ಸೂಚನೆಗಳು, ತಪಾಸಣೆ ಹಾಗೂ ಚಿಕಿತ್ಸೆಯ ಮಹತ್ವದ ಕುರಿತು ಅವರು ಮಾಹಿತಿ ನೀಡಿದರು. ಅಲ್ಲದೇ, ಈ ಕಾಯಿಲೆಗೆ ಸೂಕ್ತ ಸಂದರ್ಭದಲ್ಲಿ ತಜ್ಞ ವೈದ್ಯ-ರಿಂದ ಚಿಕಿತ್ಸೆ ಪಡೆದರೆ ಶೀಘ್ರವಾಗಿ ಗುಣಮುಖರಾಗಬಹುದು ಎಂದು ಹೇಳಿದರು.

ಡಾ. ಶೃತಿ ಶಿಳ್ಳಿನ ಮಾತನಾಡಿ, ಗಳಗಂಡ, ಹೈಪೋಥೈರಾಯ್ಡಿಸಂ ಮತ್ತು ಹೈಪರ್ ಥೈರಾಯೀಡಿಸಮ್ ರೋಗ ಲಕ್ಷಣಗಳು ಮತ್ತು ಅಯೋಡಿನ್ ಕೊರತೆಯನ್ನು ನೀಗಿಸುವ ಕುರಿತು ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದರು.

ಈ ಶಿಬಿರದಲ್ಲಿ ಒಟ್ಟು 128 ವಿದ್ಯಾರ್ಥಿನಿಯರಿಗೆ ಥೈರಾಯ್ಡ್ ಪರೀಕ್ಷೆ ನಡೆಸಲಾಯಿತು.

ಶಸ್ತ್ರ ಚಿಕಿತ್ಸೆ ವಿಭಾಗದ ವೈದ್ಯರಾದ ಡಾ. ಶಿವರಾಜ ಮಂಗ್ಯಾಳ, ಶಾಲೆಯ ಮುಖ್ಯ ಶಿಕ್ಷಕಿ ವಿ. ಪಿ. ನೀಡೋಣಿ, ಆಸ್ಪತ್ರೆಯ ಸ್ನಾತಕೋತ್ತರ ವಿದ್ಯಾರ್ಥಿಗಳು, ಶಾಲೆಯ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಶಾಲೆಯ ಸಹ ಶಿಕ್ಷಕ ಎಂ. ಎಂ. ಅಳ್ಳೊಳ್ಳಿ ನಿರೂಪಿಸಿದರು.

# ಸೈಕಲ್ ಸವಾರಿ ಚಿತ್ರ ಯಶಸ್ವಿಯಾಗಲಿ :ಸುಣಗಾರ

**ಉದಯರಶ್ಮಿ ನ್ಯೂಸ್**



ಸಿಂದಗಿ: ನಗರದ ಪ್ರಶಾಂತ ಚಿತ್ರಮಂದಿರದಲ್ಲಿ ಇಂದು ರಾಜ್ಯಾದ್ಯಂತ ತೆರೆಕಂಡ ಸೈಕಲ್ ಸವಾರಿ ಚಿತ್ರಕ್ಕೆ ರಿಬನ್ ಕಟ್ ಮಾಡುವ ಮೂಲಕ ಮಾಜಿ ಶಾಸಕ ಶರಣಪ್ಪ ಸುಣಗಾರ ಚಾಲನೆ ನೀಡಿದರು

ಚಿತ್ರಕ್ಕೆ ಚಾಲನೆ ನೀಡಿದ ನಂತರ ಮಾತನಾಡಿದ ಅವರು, ಉತ್ತರ ಕರ್ನಾಟಕದ ಹೊಸ ಪ್ರತಿಭೆಗಳನ್ನು ಹೊಂದಿರುವ ಈ ಚಿತ್ರವು ಯಶಸ್ವಿಯಾಗಿ ಪ್ರದರ್ಶನಗೊಳ್ಳಲಿ, ಹಾಗೂ ಹೊಸ ಪ್ರತಿಭೆಗಳನ್ನು ಪ್ರೋತ್ಸಾಹಿಸೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಚಿತ್ರದ ನಟ ಶಿವಾಜಿ ಮೆಟಗಾರ, ಉದ್ದಿಮೆದಾರ ಸಂತೋಷ ದೊಡಮನಿ, ಜಿಲ್ಲಾ ಆಖಖ ಸಂಚಾಲಕ ವಾಯ್.ಸಿ.ಮಯೂರ, ಹೋರಾಟಗಾರರಾದ ಡಾ.ದಸ್ತಗೀರ. ಇಂಗಳಗಿ, ಮಡಿವಾಳ ನಾಯ್ಕೋಡಿ, ಡಾ.ರಾಜಶೇಖರ ನರಗೋದಿ, ಶಂಕರಲಿಂಗ ಬೂದಿಹಾಳ, ಪೀರು ಕೇರೂರ, ದೊಡ್ಡಪ್ಪ ಮುದನೂರ, ನೀಲಕಂಠ ಚಲವಾದಿ ಸೇರಿದಂತೆ ಅನೇಕ ಪ್ರೇಕ್ಷಕರಿದ್ದರು.

## ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಡಾ.ರಿಚರ್ಡ್ ವಿನ್ಸೆಂಟ್ ಡಿಸೋಜ್ ಸಭೆ

# 5 ಮತಗಟ್ಟೆಗಳ ವಿಲೀನ, 18 ಹೊಸ ಮತಗಟ್ಟೆಗಳ ಸ್ಥಾಪನೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ಮತದಾರರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಅರ್ಹತಾ ನ. 01ಕ್ಕೆ ಸಂಬಂಧಿಸಿದಂತೆ ಕರಡು ಮತದಾರರ ಪಟ್ಟಿಯನ್ನು ಈಗಾಗಲೇ ಪ್ರಕಟಿಸಲಾಗಿದ್ದು, ಜಿಲ್ಲೆಯಲ್ಲಿ 5 ಮತಗಟ್ಟೆಗಳನ್ನು ವಿಲೀನಗೊಳಿಸಲಾಗಿದ್ದು, 18 ಹೊಸ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಮನ್ವಯತೆ ಸಾಧಿಸಲು ಬಿಎಲ್‌ಎಗಳ ನೇಮಕ ಮಾಡಿಕೊಂಡು ಶುದ್ಧ ಅಂತಿಮ ಮತದಾರರ ಪಟ್ಟಿಗೆ ಸಹಕ-ರಿಸುವಂತೆ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಸರ್ಕಾರದ ಕಾರ್ಯದರ್ಶಿಗಳಾದ ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ, ಮತದಾರರ ಪಟ್ಟಿಯ ವೀಕ್ಷಕರಾದ ಡಾ.ರಿಚರ್ಡ್ ವಿನ್ಸೆಂಟ್ ಡಿಸೋಜ್ ಹೇಳಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿದ ಅವರು, ಈಗಾಗಲೇ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಪಕ್ಷದ ಬಿಎಲ್‌ಎಗಳನ್ನು ನೇಮಕ ಮಾಡಿಕೊಂಡು ಮುತುವರ್ಜಿ ವಹಿಸಿ ಮತಗಟ್ಟೆ ಮಟ್ಟದಲ್ಲಿ ಮತದಾರ ಪಟ್ಟಿ ಪರಿಷ್ಕರಣೆಗೆ ಸಹಕರಿಸಬೇಕು. ಮತದಾರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತೆಗೆದುಹಾಕುವುದು, ತಿದ್ದುಪಡಿ ಸೇ-ರಿದಂತೆ ಹಕ್ಕು ಮತ್ತು ಆಕ್ಷೇಪಣೆಗಳ ಸಲ್ಲಿಕೆಗೆ ಅವಕಾಶವಿರುವುದರಿಂದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೆ ನಮೂನೆ 6, ಮತದಾರ ಪಟ್ಟಿಯಿಂದ ಹೆಸರನ್ನು ತೆಗೆದುಹಾಕಲು ನಮೂನೆ 7, ಮತದಾರ ಗುರುತಿನ ಚೀಟಿಗೆ ಆಧಾರ ಸಂಖ್ಯೆ ಅಥವಾ ಇತರೆ ದಾಖಲೆಗಳ ಜೋಡಣೆಗೆ ನಮೂನೆ 6ಬಿ, ಮತದಾರ ಪಟ್ಟಿಯಲ್ಲಿನ ತಿದ್ದುಪಡಿ, ಬದಲಿ ಗುರುತಿನ ಚೀಟಿ, ಮತದಾರರು ಒಂದು ವಿಧಾನಸಭಾ ಕ್ಷೇತ್ರದಿಂದ ಮತ್ತೊಂದು ವಿಧಾನಸಭಾ ಕ್ಷೇತ್ರಕ್ಕೆ ಅಥವಾ ಒಂದೇ ವಿಧಾನಸಭಾ ಕ್ಷೇತ್ರದಲ್ಲಿರುವ ಭಾಗಕ್ಕೆ ಸ್ಥಳಾಂತರಕ್ಕೆ ನಮೂನೆ 8ರಲ್ಲಿ ಅರ್ಜಿಯನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಮತದಾರ ಪಟ್ಟಿಗೆ ಸಂಬಂಧಿಸಿದಂತೆ ಯಾವುದೇ ಗೊಂದಲಗಳಿದ್ದಲ್ಲಿ ವಿಜಯಪುರ ಜಿಲ್ಲೆಯ ಮತದಾರರ ಪಟ್ಟಿ ವೀಕ್ಷಕರಾದ ಡಾ.ರಿಚರ್ಡ್ ವಿನ್ಸೆಂಟ್ ಡಿಸೋಜ್ ಮೊ: 9113049951 ಸಂಪರ್ಕಿಸಬಹುದಾಗಿದೆ ಎಂದು ಹೇಳಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ದಿನಾಂಕ : 25-09-2023ರನ್ವಯ ಮತದಾರ ಪಟ್ಟಿಯ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ ಅರ್ಹತಾ ದಿನಾಂಕ : 01-01-2024ಕ್ಕೆ ಸಂಬಂಧಿಸಿದಂತೆ ಮತದಾರರ ಪಟ್ಟಿಯನ್ನು ಪರಿಷ್ಕರಿಸುವ ಕುರಿತು ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿದೆ. ದಿನಾಂಕ : 27-10-2023 ರಿಂದ 09-12-2023ರವರೆಗೆ ಹಕ್ಕು ಮತ್ತು ಆಕ್ಷೇಪಣೆಗೆ ಅವಕಾಶ, ನಂತರ ವಿಶೇಷ ಕ್ಯಾಂಪೇನ್‌ಗಳ ಮೂಲಕ ಮತದಾರ ಪಟ್ಟಿ ಪರಿಷ್ಕರಣೆ ಮಾಡಲಾಗುತ್ತಿದೆ ಎಂದು ಹೇಳಿದರು.

ಮತದಾರ ಪಟ್ಟಿಗೆ ಸಂಬಂಧಿಸಿದಂತೆ ಆನ್‌ಲೈನ್ ಫ್ಲಾಟ್‌ಫಾರ್ಮಗಳಾದ ವಿಎಚ್‌ಎ, ಎನ್‌ವಿಎಸ್‌ಪಿ ಹಾಗೂ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ ಸಂಪರ್ಕಿಸಿ ಗರುಡ್‌ಆಪ್ ಮೂಲಕವೂ ಕೂಡಾ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲೆಯ ಅಂತಿಮ ಶುದ್ಧ ಮತದಾರರ ಪಟ್ಟಿ ಪ್ರಕಟಣೆಗೆ ಸಹಕರಿಸಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಮಹಾನಗರ ಪಾಲಿಕೆ ಆಯುಕ್ತ ಬದ್ರುದ್ದೀನ್ ಸೌದಾಗರ, ವಿಜಯಪುರ ಉಪವಿಭಾಗಾಧಿಕಾರಿ ಬಸವಣ್ಣೆಪ್ಪ ಕಲಶೆಟ್ಟಿ, ಇಂಡಿ ಉಪವಿಭಾಗಾಧಿಕಾರಿ ಆಬೀದ್ ಗದ್ಯಾಳ , ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಭೋಗೇಶ ಸೋಲಾಪುರ, ಎಚ್. ಎಸ್.ದಳವಾಯಿ, ನಿತೇಶ ತೊರವಿ, ರಾಜು ಹಿಪ್ಪರಗಿ, ಶರಣಪ್ಪ ಕುಂಬಾರ ಉಪಸ್ಥಿತರಿದ್ದರು.

# ನ.11ರಂದು ಒನಕೆ ಓಬವ್ವ ಜಯಂತಿ




**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾಡಳಿತದ ವತಿಯಿಂದ ಇದೇ ನವೆಂಬರ್ 11 ರಂದು ಒನಕೆ ಓಬವ್ವ ಜಯಂತಿ ಕಾರ್ಯಕ್ರಮ ಅರ್ಥಪೂರ್ಣವಾಗಿ ಹಮ್ಮಿಕೊಳ್ಳಲು ನಿರ್ಧರಿಸಲಾಯಿತು.

ಶುಕ್ರವಾರ ನಗರದ ಜಿಲ್ಲಾಧಿಕಾ-ರಿಗಳ ಕಚೇರಿ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅವರ ಅಧ್ಯಕ್ಷತೆಯಲ್ಲಿ ಜರುಗಿದ ಪೂರ್ವಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಂಡು, ಅಂದು ಬೆಳಿಗ್ಗೆ 9 ಗಂಟೆಗೆ ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಭಾವಚಿತ್ರ ಮೆರವಣಿಗೆಗೆ ಚಾಲನೆ, ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಜಯಂತಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲು ನಿರ್ಧರಿಸಿ, ವೇದಿಕೆ ಕಾರ್ಯಕ್ರಮಕ್ಕೆ ಶಿಷ್ಠಾಚಾರದಂತೆ ಜನಪ್ರತಿನಿಧಿಗಳು, ಗಣ್ಯರಿಗೆ ಆಹ್ವಾನ, ಆಮಂತ್ರಣ ಪತ್ರಿಕೆ, ವೇದಿಕೆ ಅಲಂಕಾರ, ಸ್ವಚ್ಛತೆ, ಆಸನ ವ್ಯವಸ್ಥೆ ಸೇರಿದಂತೆ ಎಲ್ಲ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

ಜಯಂತಿ ಕಾರ್ಯಕ್ರಮದಲ್ಲಿ ವಿವಿಧ ಸಂಘ-ಸಂಸ್ಥೆಗಳು ಸೇರಿದಂತೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವಂತೆ ನೋಡಿಕೊಂಡು ಅರ್ಥಪೂರ್ಣ ಆಚರಣೆಗೆ ನಿರ್ಧ-ರಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಸಿ.ಬಿ.ದೇವರಮನಿ, ಮುಖಂಡರಾದ ಅಭಿಷೇಕ ಚಕ್ರವರ್ತಿ, ರಾಜಶೇಖರ ಕುದರಿ, ಭೀಮರಾಯ ಜಿಗಜಿಣಗಿ, ವಾಯ್.ಎಚ್.ವಿಜಯಕರ, ವಿದ್ಯಾವತಿ ಅಂಕಲಗಿ, ಸೋಮನಗೌಡ ಕಲ್ಲೂರ, ಗಿರೀಶ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತ-ರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರಣ್‌ಕುಮಾರ ಸ್ವಾಗತಿಸಿ ವಂದಿಸಿದರು.

# ಮತಗಟ್ಟೆ-ಶಾಲೆಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಭೇಟಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಸರ್ಕಾರದ ಕಾರ್ಯದರ್ಶಿಗಳಾದ ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ, ಮತದಾರರ ಪಟ್ಟಿಯ ವೀಕ್ಷಕರಾದ ಡಾ.ರಿಚರ್ಡ್ ವಿನ್ಸೆಂಟ್ ಡಿಸೋಜ್ ಅವರು ಇಂಡಿ ವಿಧಾನಸಭಾ ಮತಕ್ಷೇತ್ರದ ವಿವಿಧ ಮತಗಟ್ಟೆಗಳಿಗೆ ಹಾಗೂ ಶಾಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಶುಕ್ರವಾರ ಇಂಡಿ ತಾಲೂಕಿನ ಹೊರ್ತಿ ಸರಕಾರಿ ಕನ್ನಡ ಗಂಡು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆ ಭೇಟಿ ನೀಡಿದ ಅವರು, ಮಕ್ಕಳ ಹಾಜರಾತಿ ಮತ್ತು ನಿರ್ಮಾಣ ಹಂತದ ಕಟ್ಟಡ ಪರಿಶೀಲನೆ ನಡೆಸಿ ಅಗತ್ಯ ಸೂಚನೆಗಳನ್ನು ನೀಡಿದರು. ನಂತರ ಸರಕಾರಿ ಉರ್ದು ಕಿರಿಯ ಪ್ರಾಥ-ಮಿಕ ಶಾಲೆ ಹಾಗೂ ಸರಕಾರಿ ಹೆಣ್ಣು ಮಕ್ಕಳ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ಮಕ್ಕಳ ಹಾಜರಾತಿ, ಮೂಲಭೂತ ಸೌಕರ್ಯಗಳ ಕುರಿತು ಪರಿಶೀಲನೆ ನಡೆಸಿದರು.

ಇಂಡಿ ವಿಧಾನಸಭಾ ಮತಕ್ಷೇತ್ರದ ಮತಗಟ್ಟೆ ಸಂಖ್ಯೆ 178 ರಿಂದ 184 ರವರೆಗೆ ಮತಗಟ್ಟೆಗಳಿಗೆ ಭೇಟಿ ನೀಡಿದ ಅವರು, ಮತಗಟ್ಟೆಗಳಲ್ಲಿರುವ ಮೂಲಸೌಲಭ್ಯಗಳ ಕುರಿತು ಪರಿಶೀಲನೆ, ಬಿಎಲ್‌ಓಗಳಿಗೆ ವಿಶೇಷ ಅಭಿಯಾನ ಬಗ್ಗೆ ತಿಳುವಳಿಕೆ ಮೂಡಿಸಿ, ಬಿಎಲ್‌ಓ ತಂತ್ರಾಂಶ ಪ್ರಗತಿ ಪರಿಶೀಲನೆ ನಡೆಸಿ, ನಮೂನೆ 6,7 ಹಾಗೂ 8ರ ಕುರಿತು ಮಾಹಿತಿ ಪಡೆದುಕೊಂಡರು.

ಹೊರ್ತಿ ಗ್ರಾಮದ ಅಂಗನವಾಡಿ, ಗ್ರಾಮ ಪಂಚಾಯತ್ ಕಚೇರಿ, ಪ್ರಾಥ-ಮಿಕ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ ರೋಗಿಗಳಿಗೆ ನೀಡುತ್ತಿರುವ ವೈದ್ಯೋಪಚಾರ ಕುರಿತು ಮಾಹಿತಿ ಪಡೆದುಕೊಂಡು, ರೋಗಿಗಳಿಗೆ ಯಾವುದೇ ತೊಂದರೆಯಾಗದಂತೆ ಸೂಕ್ತ ವೈದ್ಯೋಪಚಾರ ನಡೆಸಬೇಕು. ಯಾವುದೇ ಲೋಪವಾಗದಂತೆ ಕಾರ್ಯನಿರ್ವಹಿಸುವಂತೆ ಸಂಬಂಧಿಸಿದವರಿಗೆ ಸೂಚನೆ ನೀಡಿದ ಅವರು, ಹಳಗುಣಕಿಯ ಸಮಾಜ ಕಲ್ಯಾಣ ಇಲಾಖೆಯ ಸರಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ವಿದ್ಯಾರ್ಥಿಗಳಿಗೆ ಒದಗಿಸಲಾಗುತ್ತಿರುವ ಸೌಕರ್ಯಗಳ ಕುರಿತು ವಿದ್ಯಾರ್ಥಿಗಳಿಂದ ಮಾಹಿತಿ ಪಡೆದುಕೊಂಡರು. ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಭೇಟಿ ನೀಡಿ, ವಸತಿ ಶಾಲೆಯಲ್ಲಿರುವ ಪ್ರಯೋಗಾಲ ವೀಕ್ಷಣೆ ನಡೆಸಿದ ಅವರು, ವಸತಿ ಶಾಲೆಯಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಶಾಲೆಯ ಆವರಣದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಗಿಡ-ಮರಗಳನ್ನು ಬೆಳೆಸುವ ಮೂಲಕ ಉತ್ತಮ ವಾತಾವರಣ ನಿರ್ಮಿಸಿಕೊಡುವ ಮೂಲಕ ವಿದ್ಯಾರ್ಥಿಗಳ ಉತ್ತಮ ಫಲಿತಾಂಶಕ್ಕೆ ಪ್ರೇರೆಪಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಇಂಡಿ ತಹಶೀಲ್ದಾರ್ ವಿಜಯಕುಮಾರ್ ಕಡಕಬಾವಿ, ತಾಲೂಕ ಸಮಾಜ ಕಲ್ಯಾಣಾಧಿಕಾರಿ ಬಿ.ಜೆ.ಇಂಡಿ, ಚಡಚಣ ಕ್ಷೇತ್ರ ಶಿಕ್ಷಣಾಧಿಕಾರಿ ನಾಯಕ,ಇಂಡಿ ಕ್ಷೇತ್ರ ಶಿಕ್ಷಣಾಧಿಕಾರಿ ಡಿ.ಎಸ್.ಆಲಗೂರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ಗೀತಾ ಗುತ್ತರಗಿ ಮಠ,ಜಿಲ್ಲಾ ಪಂಚಾಯತಿಯ ಯೋಜನಾ ವಿಭಾಗದ ಅಧಿಕಾರಿ ಎ.ಬಿ.ಅಲ್ಲಾಪೂರ ಸೇರಿದಂತೆ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾ-ರಿಗಳು ಉಪಸ್ಥಿತರಿದ್ದರು.

# ನ.6ರಂದು ಬಿಎಲ್ಡಿಇ ಸಂಸ್ಥೆಯ ಸಂಸ್ಥಾಪನೆ ದಿನಾಚರಣೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಸಂಸ್ಥೆಯ ಸಂಸ್ಥಾಪನೆ ದಿನಾಚರಣೆ ನವೆಂಬರ 6 ರಂದು ಸೋಮವಾರ ನಡೆಯಲಿದೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಡಾ. ಆರ್. ಬಿ. ಕೊಟ್ನಾಳ, ಸಂಸ್ಥೆಯ ಶ್ರೀಮತಿ ಬಂಗಾರಮ್ಮ ಸಜ್ಜನ ಆವರಣದಲ್ಲಿರುವ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಗ್ರಂಥಾಲಯ ಸಭಾಂಗಣದಲ್ಲಿ ಬೆಳಿಗ್ಗೆ 11 ಗಂಟೆಗೆ ಈ ಕಾರ್ಯಕ್ರಮ ನಡೆಯಲಿದೆ. ಈ ಸಂದರ್ಭದಲ್ಲಿ ಸಂಸ್ಥೆಯ ಸಾಧಕ ಸಿಬ್ಬಂದಿಗಳಿಗೆ ಮತ್ತು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು ಎಂದು ತಿಳಿಸಿದ್ದಾರೆ.

ಬೆಳಗಾವಿ ಜಿಲ್ಲೆಯ ಅಥಣಿ ಶ್ರೀ ಮೋಟಗಿ ಮಠದ ಶ್ರೀ ಪ್ರಭುಚನ್ನಬಸವ ಸ್ವಾಮೀಜಿ, ಅಥಣೇಶ ಅವರು ಸಾನಿಧ್ಯ ವಹಿಸಲಿದ್ದಾರೆ. ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಸಮ- ಕುಲಾಧಿಪತಿ ಪ್ರೊ. ವೈ. ಎಂ. ಜಯರಾಜ ಪ್ರತಿಭಾ ಪುರಸ್ಕಾರ ಪ್ರಧಾನ ಮಾಡಲಿದ್ದಾರೆ. ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಜಿ. ಕೆ. ಪಾಟೀಲ, ಎ. ಎಸ್. ಪಾಟೀಲ ಕಾಲೇಜಿನ ಪ್ರಾಚಾರ್ಯ ಪ್ರೊ. ಬಿ. ಎಸ್. ಬೆಳಗಲಿ, ಸಂಸ್ಥೆಯ ಎಲ್ಲ ನಿರ್ದೇಶಕರು, ನಾನಾ ಕಾಲೇಜುಗಳ ಪ್ರಾಚಾರ್ಯರು ಮತ್ತು ಸಿಬ್ಬಂದಿ ಉಪಸ್ಥಿತರಿರಲಿದ್ದಾರೆ ಎಂದು ಡಾ. ಆರ್. ಬಿ. ಕೊಟ್ನಾಳ ತಿಳಿಸಿದ್ದಾರೆ.

# ಜೀವಜಲವನ್ನು ನಿಯಮಿತವಾಗಿ ಬಳಸಿ :ಶಾಸಕ ರಾಜುಗೌಡ

**ಉದಯರಶ್ಮಿ ನ್ಯೂಸ್**




ಹೂವಿನ ಹಿಪ್ಪರಗಿ: ನೀರು ಜೀವ ಜಲವಾಗಿದ್ದು, ಅದನ್ನು ಗ್ರಾಮಸ್ಥರು ನಿಯಮಿತವಾಗಿ ಬಳಕೆ ಮಾಡಬೇಕು.

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನೀರು ಒದಗಿಸುವ ಉದ್ದೇಶದಿಂದ ಮನೆ ಮನೆಗೂ ಗಂಗೆ ಯೋಜನೆಯಡಿ ಕ್ಷೇತ್ರದ ಪ್ರತಿ ಮನೆಗೂ ನಲ್ಲಿ ಮೂಲಕ ಶುದ್ಧ ಕುಡಿಯುವ ನೀರು ಪೂರೈಸಲಾಗುತ್ತಿದೆ ಎಂದು ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ ಹೇಳಿದರು.

ಬಸವನ ಬಾಗೇವಾಡಿ ತಾಲೂಕಿನ ಕುದರಿ ಸಾಲವಾಡಗಿ ಗ್ರಾಮದ ಪಂಚಾಯತಿ ಆವರಣದಲ್ಲಿ ನಡೆದ ಜಿಲ್ಲಾ ಪಂಚಾಯತಿ ವಿಜಯಪುರ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಡಿಯಲ್ಲಿ 2022-23ನೇ ಸಾಲಿನ ಜಲಜೀವನ ಮಿಷನ್ ಯೋಜನೆಯಲ್ಲಿ ಸುಮಾರು 3 ಕೋಟಿ 56 ಲಕ್ಷ ರೂಗಳ ವೆಚ್ಚದಲ್ಲಿ ಮನೆ ಮನೆ ನಳ ಸಂಪರ್ಕ ಕಾಮಗಾರಿಗೆ ಭೂಮಿ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನೀರು ಒದಗಿಸುವ ಉದ್ದೇಶದಿಂದ ಮನೆ ಮನೆಗೂ ಗಂಗೆ ಯೋಜನೆಯಡಿ ಕ್ಷೇತ್ರದ ಪ್ರತಿ ಮನೆಗೂ ನಲ್ಲಿ ಮೂಲಕ ಶುದ್ಧ ಕುಡಿಯುವ ನೀರು ಪೂರೈಸಲಾಗುತ್ತಿದೆ ಎಂದರು.

ನಮ್ಮ ಗ್ರಾಮ ಕುದ-ರಿಸಾಲವಾಡಗಿಯಲ್ಲಿ ಸುಮಾರು ವರ್ಷದಿಂದ ಅಭಿವೃದ್ಧಿ ವಿಷಯದಲ್ಲಿ ಹಿಂದೆ ಉಳಿದಿದೆ. ಈಗ ಅಭಿವೃದ್ಧಿ ಮಾಡುವ ಅವಕಾಶ ನೀಡಿದ ನೀಡಿದ ನಮ್ಮ ಗ್ರಾಮವು ಸೇರಿದಂತೆ ಕ್ಷೇತ್ರದ ಜನರಿಗೆ ನಾನು ಋಣ ತಿರಿಸುವ ಕಾರ್ಯ ಮಾಡುತ್ತೇನೆ. ಅದೇ ತೆರನಾಗಿ ಕುದರಿ ಸಾಲವಾಡಗಿ ಗ್ರಾಮಕ್ಕೆ ಹೂವಿನಹಿಪ್ಪರಗಿಯಿಂದ ನಮ್ಮ ಗ್ರಾಮಕ್ಕೆ ರಸ್ತೆ ಸುದಾರಣೆ, ಪಶು ಆಸ್ಪತ್ರೆ, ಪದವಿ ಪೂರ್ವ ವಿದ್ಯಾಲಯ, ವಿದ್ಯುತ್ ಘಟಕ ಸೇರಿ ಹತ್ತು ಜನೋಪಯೋಗಿ ಕಾರ್ಯಗಳಿದ್ದು ಅವುಗಳನ್ನು ಮುಂದಿನ ದಿನಮಾನದಲ್ಲಿ ಹಂತ ಹಂತವಾಗಿ ಬೇಡಿಕೆಗೆ ಅನುಗುಣವಾಗಿ ಅನುದಾನವನ್ನು ತಂದು ಕಾರ್ಯ ಮಾಡುತ್ತೇನೆ. ಈಗ ರಾಜ್ಯದಲ್ಲಿ ಬರಗಾಲ ಇದಂತೆ ನಮ್ಮ ಸರಕಾರದಲ್ಲಿಯೂ ಕೂಡಾ ಬರಗಾಲ ಇದೆ. ಅನುದಾನ ಕಡಿಮೆ ನೀಡುತ್ತಿದ್ದಾರೆ ಮುಂದಿನ ದಿನಗಳಲ್ಲಿ ಅದು ಸರಿ ಹೋಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡ ಅನಿಲಗೌಡ ಪಾಟೀಲ ಮಾತನಾಡಿ, ಗ್ರಾಮ ಪಂಚಾಯತಿಗೆ ಎರಡು ಬಾರಿ ಗಾಂಧಿ ಗ್ರಾಮ ಪುರಸ್ಕಾರ ನೀಡಿದ್ದಾರೆ. ಅದು ಹೇಗೆ ನೀಡಿದ್ದಾರೆ ಗೊತ್ತಿಲ್ಲ, ಪಂಚಾಯತಿ ಅವರು ದುಡ್ಡು ಕೊಟ್ಟು ಪ್ರಶಸ್ತಿ ತಂದರೆ ಅದು ಸಲ್ಲಲ್ಲ, ಗ್ರಾಮದಲ್ಲಿ ಅಭಿವೃದ್ಧಿ ಮಾಡಿ ಪ್ರಶಸ್ತಿಯನ್ನು ಪಡೆಯುಂತಾಗಬೇಕು ಎಂದು ಸಲಹೆ ನೀಡಿದರು.

ಪ್ರಾಸ್ತಾವಿಕವಾಗಿ ಪಿಡಿಓ ಬಸವರಾಜರ ಬಡಿಗೇರ ಮಾತನಾಡಿದರು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಶಕುಂತಲಾ ಲಗಳಿ, ಉಪಾಧ್ಯಕ್ಷ ಮುತ್ತಪ್ಪ ಇಂಗಳಗಿ, ಪಿ.ಕೆ.ಪಿ.ಎಸ್ ಅಧ್ಯಕ್ಷ ಸಚಿನಗೌಡ ಪಾಟೀಲ, ಗುರುನಗೌಡ ಪಾಟೀಲ, ಸಂಗನಗೌಡ ಪಾಟೀಲ, ಆನಂದ ಸಜ್ಜನ, ಬಸಣ್ಣ ಬಾಗೇವಾಡಿ, ಭೀಮನಗೌಡ ಪಾಟೀಲ, ಸಂಗಣ್ಣ ಸಜ್ಜನ, ಬೆಳಪ್ಪ ಜಕ್ಕೆನಾಳ, ಮೀರಾಸಾಬ ಮುಲ್ಲಾ, ಎಂ. ವ್ಹಿ. ಅಣ್ಣಪ್ಪನವರ, ರಫೀಕ ಬಾವೂರ, ಎಸ್. ಎಸ್. ಪಾಟೀಲ, ಗುಳಪ್ಪ ಇಂಗಳಗಿ, ಎಸ್. ವ್ಹಿ. ಪಾಟೀಲ, ಮಹ್ಮದಹನಿಪ್ ಬಿಳವಾರ, ಡಾ॥ ಕಾಶೀಮಸಾಬ ಢವಳಗಿ, ವೈಧ್ಯಾಧಿಕಾರಿ ಶ್ರೀಮತಿ ಅಕ್ಷತಾ ಗುಂದಗಿ, ಗ್ರಾಮ ಆಡಳಿತಾಧಿಕಾರಿ ಶ್ರೀಮತಿ ವಿದ್ಯಾಶ್ರೀ ಅವಟಿ, ಗ್ರಾಮೀಣು ಕುಡಿಯುವ ನೀರು ಮತ್ತು ನೈರ್ಮಲ್ಯ ಅಧಿಕಾರಿ ಶ್ರೀಶೈಲಗೌಡ ನರಸನಗೌಡರ, ನರೆಗಾ ಅಧಿಕಾರಿ ಆನಂದ ದೇಸಾಯಿ, ಈರನಗೌಡ ಪಾಟೀಲ, ಶರಣು ಡೋಣೂರ, ಬಸವರಾಜ ಗುಡ್ಡೋಡಗಿ, ಮಕ್ಬೂಲ ಆಲ್ದಾಳ, ಮೂಸಾ ಖಾಚಾಪುರ, ಬಂದೇನವಾಜ ಕತ್ನಳ್ಳಿ, ಪರಸು ಲಗಳಿ, ಲಾಲಮಹ್ಮದ ಮುಲ್ಲಾ, ಪಿಡಿಓ ಬಿ. ಎಸ್. ಬಡಿಗೇರ ಪಂಚಾಯತಿ ಸಿಬ್ಬಂದಿ ಹಾಗೂ ಸದಸ್ಯರು ಇದ್ದರು.

> "ರಾಜ್ಯದ ಜನತೆಗೆ ಚುನಾವಣೆಯಲ್ಲಿ ನೀಡಿದ ಭರವಸೆಗಳನ್ನು ನೀಡಿದ ಹಿನ್ನೆಲೆಯಲ್ಲಿ ಸರಕಾರದ ಅನುದಾನ ಅಲ್ಲಿಯೇ ಹೋಗುತ್ತಿದೆ. ಆ ಕಾರಣದಿಂದ ಅಭಿವೃದ್ದಿಗೆ ಹಣ ನೀಡುವಲ್ಲಿ ಹಿಂದಿದೆ. ಮುಂದಿನ ದಿನಗಳಲ್ಲಿ ಅನುದಾನ ತಂದು ಅಭಿವೃದ್ಧಿ ಮಾಡಿ ದೇವರ ಹಿಪ್ಪರಗಿ ಕ್ಷೇತ್ರವನ್ನು ಮಾದರಿ ಕ್ಷೇತ್ರವಾಗಿ ಮಾಡುತ್ತೇನೆ."
>
> **– ರಾಜುಗೌಡ ಪಾಟೀಲ, ಶಾಸಕರು.**

# ಗ್ರಾಮೀಣ ಜನರ ಅಭಿವೃದ್ಧಿಗಾಗಿ ಶ್ರಮಿಸಿ :ಜಿಪಂ ಸಿಇಒ ಶಿಂಧೆ

ಉದಯರಶ್ಮಿ ನ್ಯೂಸ್



ವಿಜಯಪುರ: ಜಿಲ್ಲೆಯಲ್ಲಿ ಬರಗಾಲ ಇರುವುದರಿಂದ ಗ್ರಾಮೀಣರಿಗೆ ಅನುಕೂಲ ಕಲ್ಪಿಸಿ ಕೊಡುವ ನಿಟ್ಟಿನಲ್ಲಿ ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತಿಗಳನ್ನು ಮಾದರಿ ಗ್ರಾಮ ಪಂಚಾಯತಿಗಳನ್ನಾಗಿಸಲು ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ರಾಹುಲ ಶಿಂಧೆ ಅವರು ಎಲ್ಲ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಇತ್ತೀಚಿಗೆ ಬರಗಾಲ ನಿರ್ವಹಣೆ ಕುರಿತು ನಡೆದ ವಿಡಿಯೋ ಸಂವಾದ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯ ಬಹುತೇಕ ಗ್ರಾಮ ಪಂಚಾಯತಿಗಳಲ್ಲಿ ಜನರ ಹಿತದೃಷ್ಟಿಯಿಂದ ಕಾರ್ಯ ನಿರ್ವಹಿಸಲಾಗುತ್ತಿದೆ. ಉದ್ಭವಿಸುವ ಸಮಸ್ಯೆಗಳ ಪರಿಹರಿಸಿ ತಮ್ಮ ಗ್ರಾಮದ ಜನರ ಒಳಿತಿಗಾಗಿ ಕಾರ್ಯ ನಿರ್ವಹಿಸಬೇಕು. ಬರ ಇರುವ ಸಂಕಷ್ಟ ಸ್ಥಿತಿಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆ ಗ್ರಾಮೀಣರಿಗೆ ಅತ್ಯುತ್ತಮ ಯೋಜನೆಯಾಗಿದೆ. ನರೇಗಾ ಯೋಜನೆಯಡಿ ಕೆಲಸ ಕೋರಿ ಸಲ್ಲಿಸುವ ಅರ್ಜಿಗಳಿಗೆ ಆದ್ಯತೆ ನೀಡಿ, ಸಕಾರಾತ್ಮಕವಾಗಿ ಸ್ಪಂದಿಸಬೇಕು. ಅರ್ಜಿ ನೀಡಿದ ತಕ್ಷಣವೇ ಅವರಿಗೆ ಕೆಲಸ ಒದಗಿಸಿ ಅವರಿಗೆ ಸಹಾಯ ಮಾಡಿ ಎಂದು ಎಲ್ಲ ಗ್ರಾಮ ಪಂಚಾಯತಿಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ನರೇಗಾ ಯೋಜನೆಯನ್ನು ಅನುಷ್ಠಾನ ಮಾಡುವ ಎಲ್ಲ ಇಲಾಖೆಯ ಅಧಿಕಾರಿಗಳು ಗ್ರಾಮ ಪಂಚಾಯತಿಯೊಂದಿಗೆ ಸಮನ್ವಯ ಸಾಧಿಸಿಕೊಂಡು ಗ್ರಾಮೀಣ ಜನರಿಗೆ ಕೆಲಸ ಒದಗಿಸಬೇಕು ಎಂದರು. ಪ್ರತಿ ಗ್ರಾಮ ಪಂಚಾಯತಿಯಲ್ಲಿ ರೈತರಿಗೆ ವೈಯಕ್ತಿಕ ಕಾಮಗಾರಿ ಒದಗಿಸಬೇಕು. ಕೂಲಿ ಕಾರ್ಮಿಕರ ಸಂಖ್ಯಾಧಾರದ ಮೇಲೆ ಸಮುದಾಯ ಕಾಮಗಾರಿಗಳನ್ನು ಆರಂಭಿಸಬೇಕು ಎಂದರು.

ಜನರ ಅಭಿವೃದ್ಧಿಯೇ ಗ್ರಾಮದ ಅಭಿವೃದ್ಧಿ ಎಂದು ಕೆಲಸ ಮಾಡಿ. ಕ್ಲಿಷ್ಟಕರ ಸಂದರ್ಭದಲ್ಲಿ ಅವರ ನೆರವಿಗೆ ನಿಲ್ಲಬೇಕು. ಜನರ ಮನಸ್ಸಿನಲ್ಲಿ ಸದಾ ಕಾಲ ಉಳಿಯುವಂತಹ ಕೆಲಸ ಮಾಡಿ ಎಂದರು. ಗ್ರಾಮೀಣ ಜನರಿಗೆ ಸಹಾಯ ಮಾಡಲು ಮಹಾತ್ಮ ಗಾಂಧಿ ನರೇಗಾ ಯೋಜನೆ ಸೇರಿ ವಿವಿಧ ಯೋಜನೆಗಳಡಿ ಸಾಕಷ್ಟು ಅನುದಾನ ಲಭ್ಯವಿದ್ದು, ಕ್ರಿಯಾಶೀಲತೆ ಮೈಗೂಡಿಸಿಕೊಂಡು ಕಲೆಸ ನಿರ್ವಹಿಸಿ ಎಂದರು. ನೀವು ಕಾರ್ಯ ನಿರ್ವಹಿಸುವ ಗ್ರಾಮ ಪಂಚಾಯತಿಗಳನ್ನು ಮಾದರಿಯಾಗಿಸಲು ಶ್ರಮಿಸಬೇಕಿದೆ ಎಂದರು.

ಶ್ಲಾಘನೆ: ಬಿಜ್ಜರಗಿ,ಚವಡಿಹಾಳ, ಬಬಲಾದಿ, ಝುಳಕಿ ಸೇರಿದಂತೆ ಇತರೆ ಹಲವು ಮಾದರಿ ಗ್ರಾಮ ಪಂಚಾಯತಿ ಎನಿಸಿಕೊಂಡಿವೆ. ಜಿಲ್ಲೆಯಲ್ಲಿ 1200 ಅಂಗನವಾಡಿ ಕೇಂದ್ರಗಳಿಗೆ ಗ್ರಾಮ ಪಂಚಾಯತಿ ವತಿಯಿಂದ ಬೆಂಚ್ ವಿತರಣೆ ಮಾಡುವ ಮೂಲಕ ಜಿಲ್ಲೆ ರಾಜ್ಯದಲ್ಲಿಯೇ ಮಾದರಿಯಾಗಿದೆ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಇಚ್ಛಾಶಕ್ತಿಯಿಂದ ಸಾಧ್ಯವಾಗಿಸಿದೆ.

ಉಪ ಕಾರ್ಯದರ್ಶಿಗಳಾದ ಡಾ.ವಿಜಯಕುಮಾರ ಆಜೂರ ಅವರು ಮಾತನಾಡಿ ಸರ್ಕಾರದ ನಿರ್ದೇಶನದಂತೆ ಈಗಾಗಲೇ ಜಿಲ್ಲೆಯಲ್ಲಿ ಅಕ್ಟೋಬರ್ ತಿಂಗಳು ಪೂರ್ಣ "ಉದ್ಯೋಗ ಖಾತರಿ ನಡಿಗೆ, ಸುಸ್ಥಿರತೆಯೆಡೆಗೆ" ಅಭಿಯಾನ ಹಮ್ಮಿಕೊಂಡು ಅಭಿಯಾನದ ಭಾಗವಾಗಿ ಪ್ರತಿ ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ನೀಡಲಾಗಿದೆ. ಎಲ್ಲ ಗ್ರಾಮ ಪಂಚಾಯತಿಗಳಲ್ಲಿ 2024-25ನೇ ಸಾಲಿನ ಕ್ರಿಯಾ ಯೋಜನೆ ತಯಾರಿಸುವ ಸಲುವಾಗಿ ವಾರ್ಡ್ ಸಭೆ ಮತ್ತು ಗ್ರಾಮ ಸಭೆಯನ್ನು ಹಮ್ಮಿಕೊಳ್ಳಬೇಕು ಎಂದರು. ಈ ಪ್ರಕ್ರಿಯೆಯಲ್ಲಿ ಗ್ರಾಮ ಪಂಚಾಯತಿ ಹಂತದ ಎಲ್ಲ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಕ್ರೀಯವಾಗಿ ಪಾಲ್ಗೊಂಡು ಅಭಿಯಾನ ಯಶಸ್ವಿಗೊಳಿಸಬೇಕು ಎಂದರು.

ಸಭೆಯಲ್ಲಿ ಮುಖ್ಯ ಲೆಕ್ಕಾಧಿಕಾರಿ ರಾಮಣ್ಣ ಅಥಣಿ ಸೇರಿದಂತೆ ಎಲ್ಲ ಅನುಷ್ಠಾನ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತಿ ಮೂಲಕ ಹಾಜರಿದ್ದರು.

# ನ.4ರಂದು 14 ಗ್ರಾಮಗಳಲ್ಲಿ ಪಿಂಚಣಿ ಅದಾಲತ್

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲೆಯ ಪಿಂಚಣಿದಾರರ ಅಹವಾಲು ಆಲಿಸಲು ಹಾಗೂ ಅರ್ಹರಿಗೆ ಪಿಂಚಣಿ ಮಂಜೂರಾತಿಗಾಗಿ ಸಾಮಾಜಿಕ ಭದ್ರತಾ ಯೋಜನೆಯಡಿ ಜಿಲ್ಲೆಯ 14 ಗ್ರಾಮಗಳಲ್ಲಿ ನವೆಂಬರ್ 4 ರಂದು ಬೆಳಿಗ್ಗೆ 11 ಗಂಟೆಗೆ ಪಿಂಚಣಿ ಅದಾಲತ್ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ ಮಖಣಾಪೂರ ಗ್ರಾಮದ ಶ್ರೀ ಸೋಮನಿಂಗೇಶ್ವರ ದೇವಸ್ಥಾನದಲ್ಲಿ ವಿಜಯಪುರ ಉಪ ವಿಭಾಗಾಧಿಕಾರಿಗಳು, ಗುತ್ತರಗಿ ಶ್ರೀ ಕರಿವಿರೇಶ್ವರ ದೇವಸ್ಥಾನದಲ್ಲಿ ಇಂಡಿ ಉಪವಿಭಾಗಾಧಿಕಾರಿಗಳು, ನಾಗಠಾಣ ನಾಡಕಚೇರಿ ಆವರಣದಲ್ಲಿ ವಿಜಯಪುರ ತಹಶೀಲ್ದಾರ ಗ್ರೇಡ್-2 ಅವರು ಹಾಗೂ ಕೊಡಬಾಗಿ ಶ್ರೀ ಸಂಗಮೇಶ್ವರ ದೇವಸ್ಥಾನದಲ್ಲಿ ಬಬಲೇಶ್ವರ ಗ್ರೇಡ್-2 ತಹಶೀಲ್ದಾರ ಅವರು ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಅತಾಲಟ್ಟಿ ಗ್ರಾಮದ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ತಿಕೋಟಾ ತಹಶೀಲ್ದಾರ ಗ್ರೇಡ್-2, ಅರಳಿಚಂಡಿ ಶ್ರೀ ಹಿರೋಡೇಶ್ವರ ದೇವಸ್ಥಾನದಲ್ಲಿ ಬಸವನಬಾಗೇವಾಡಿ ಗ್ರೇಡ್-2 ತಹಶೀಲ್ದಾರ, ಮಜರೆಕೊಪ್ಪ ಗ್ರಾಮ ದೇವತೆ ದೇವಸ್ಥಾನದಲ್ಲಿ ನಿಡಗುಂದಿ ಗ್ರೇಡ್-2 ತಹಶೀಲ್ದಾರ, ಬಾಗಾನಗರ ಲಕ್ಷ್ಮಮ್ಮದೇವಿ ದೇವಸ್ಥಾನದಲ್ಲಿ ಕೊಲ್ಹಾರ ತಹಶೀಲ್ದಾರ, ವಣಕಿಹಾಳ ಗ್ರಾಮದ ಶ್ರೀ ಮಾರುತೇಶ್ವರ ದೇವಾಲಯದಲ್ಲಿ ಮುದ್ದೇಬಿಹಾಳ ಗ್ರೇಡ್-2 ತಹಶೀಲ್ದಾರ, ಚಬನೂರ ಗ್ರಾಮದ ಶ್ರೀ ಮಾರುತಿ ದೇವಸ್ಥಾನದಲ್ಲಿ ತಾಳಿಕೋಟೆ ತಹಶೀಲ್ದಾರ ಅವರು ಪಿಂಚಣಿ ಅದಾಲತ್ ನಡೆಸಲಿದ್ದಾರೆ.

ಹಿಂಗಣಿ ಗ್ರಾಮದ ಗ್ರಾಮ ಪಂಚಾಯತ್ ಕಾಯಾಲಯದಲ್ಲಿ ಇಂಡಿ ಗ್ರೇಡ್-2 ತಹಶೀಲ್ದಾರ, ಜೀರಂಕಲಗಿ ಗ್ರಾಮದ ಶ್ರೀ ಮಹಾದೇವ ದೇವಸ್ಥಾನದಲ್ಲಿ ಚಡಚಣ ಗ್ರೇಡ್-2 ತಹಶೀಲ್ದಾರ, ಚಿಕ್ಕ ಅಲ್ಲಾಪೂರ ಗ್ರಾಮದ ಸರಕಾರಿ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ಸಿಂದಗಿ ಗ್ರೇಡ್-2 ತಹಶೀಲ್ದಾರ ಅವರು ಹಾಘೂ ಪಡಗಾನೂರ ಸರ್ಕಾರಿ ಕನ್ನಡ ಗಂಡು ಮಕ್ಕಳ ಶಾಲೆಯಲ್ಲಿ ದೇವರಹಿಪ್ಪರಗಿ ಗ್ರೇಡ್-2 ತಹಶೀಲ್ದಾರ ಅವರು ಪಿಂಚಣಿ ಅದಾಲತ್ ನಡೆಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಕರ್ನಾಟಕ ಲೋಕಸೇವಾ ಆಯೋಗ ಪರೀಕ್ಷೆ :ನಿಷೇಧಾಜ್ಞೆ

ಉದಯರಶ್ಮಿ ನ್ಯೂಸ್

ವಿಜಯಪುರ: ಕರ್ನಾಟಕ ಲೋಕಸೇವಾ ಆಯೋಗ ಅಧಿಸೂಚಿಸಿರುವ ರಾಜ್ಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆಯಲ್ಲಿನ ಗ್ರೂಪ್ ಸಿ ಹುದ್ದೆಗಳಿಗೆ ಜಿಲ್ಲೆಯಲ್ಲಿ ನವೆಂಬರ್ 4 ಮತ್ತು 5 ರಂದು ಕನ್ನಡ ಭಾಷಾ-ಸ್ಪರ್ಧಾತ್ಮಕ ಪರೀಕ್ಷೆಗಳು ಜರುಗಲಿದ್ದು, ಸುವ್ಯವಸ್ಥಿತ ಪರೀಕ್ಷೆ ನಡೆಸುವ ದೃಷ್ಟಿಯಿಂದ ಮುಂಜಾಗ್ರತವಾಗಿ ಪರೀಕ್ಷಾ ಕೇಂದ್ರದ 200 ಮೀ. ವ್ಯಾಪ್ತಿಯಲ್ಲಿ ಕಲಂ 144ರನ್ವಯ ಬೆಳಿಗ್ಗೆ 9 ರಿಂದ ಪರೀಕ್ಷೆ ಮುಕ್ತಾಯವಾಗುವರೆಗೆ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಆದೇಶ ಹೊರಡಿಸಿದ್ದಾರೆ.

ಪರೀಕ್ಷಾ ಕೇಂದ್ರದ ಸಮೀಪದಲ್ಲಿರುವ ಝರಾಕ್ಸ್ ಅಂಗಡಿಗಳು, ಕಂಪ್ಯೂಟರ್ ಸೆಂಟರ್‌ಗಳು, ಇಂಟರ್‌ನೆಟ್, ಸೈಬರ್ ಕೆಫೆಗಳು, ಕೋಚಿಂಗ್ ಕೇಂದ್ರಗಳು ಪರೀಕ್ಷೆ ಅವಧಿಯಲ್ಲಿ ತೆರೆಯದಂತೆ ಆದೇಶಿಸಲಾಗಿದೆ.

# ಸಾಮಾಜಿಕ ಜಾಲತಾಣಗಳಲ್ಲಿ ಕನ್ನಡ ಸಾಹಿತ್ಯ

ಉದಯರಶ್ಮಿ ದಿನಪತ್ರಿಕೆ



ಜಯ್ ನುಡಿ

● ಜಯಶ್ರೀ.ಜೆ.ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು, ಬೆಳಗಾವಿ
9449234142

ನಾವೆಲ್ಲ ಕನ್ನಡಮ್ಮನ ಸತ್ಪುತ್ರರು ಎಂದು ಬೀಗುವುದಕ್ಕೆ ಒಂದೇ ಎರಡೇ ಹಲವಾರು ಕಾರಣಗಳುಂಟು. ಸುಮಾರು 2000 ಕ್ಕಿಂತಲೂ ಹೆಚ್ಚಿನ ಇತಿಹಾಸ ಹೊಂದಿದ ನಮ್ಮ ಕನ್ನಡ ಭಾಷೆ ತುಂಬಾ ಪ್ರಾಚೀನವಾದುದು ಎನ್ನುವುದಕ್ಕೆ 2 ನೇ ಶತಮಾನದಲ್ಲಿ ರಚಿಸಿದ ಗ್ರೀಕ್ ಗ್ರಂಥವೊಂದರಲ್ಲಿ ಉಲ್ಲೇಖವಿದೆ. ಪ್ರಪಂಚದ ಸಾವಿರಾರು ಭಾಷೆಗಳ ಪಟ್ಟಿಯಲ್ಲಿ ನಮ್ಮ ಭಾಷೆ ಏಳನೇ ಸುಪ್ರಸಿದ್ಧ ಭಾಷೆ ಎಂದು ದಾಖಲಾಗಿದೆ. ಇದಕ್ಕೆ ಕಿರೀಟವಿಟ್ಟಂತೆ ಶಾಸ್ತ್ರೀಯ ಭಾಷೆಯ ಗರಿ ಬೇರೆ. ಕನ್ನಡಿಗರು ಪ್ರತಿಭಾವಂತರು ಅದರಲ್ಲೂ ಸಾಹಿತ್ಯ ರಚನೆಯಲ್ಲಿ ನಿಸ್ಸೀಮರು. ಅದಕ್ಕೆ ಸಾಕ್ಷಿ ನಮ್ಮ ಗಟ್ಟಿ ಸಾಹಿತ್ಯಕ್ಕೆ ದೊರೆತ ಜ್ಞಾನ ಪೀಠ ಪ್ರಶಸ್ತಿಗಳು. 'ಕುರಿತೋದದೆಯಂ ಕಾವ್ಯ ಪ್ರಯೋಗ ಪರಿಣಿತಿ ಮತಿಗಳ್'ಎಂಬ ನೃಪತುಂಗ ಮಾರ್ಗದಲ್ಲಿನ ಉಲ್ಲೇಖ ನಮ್ಮ ಅಮೋಘ ಕಾವ್ಯ ಶಕ್ತಿಗೆ ಹಿಡಿದ ಕೈಗನ್ನಡಿ. ಕನ್ನಡಿಗರ ಸಾಹಿತ್ಯಾಭಿಮಾನ ಎಂದಿಗೂ ಕುಂದಲು ಸಾಧ್ಯವಿಲ್ಲ. ಇಲ್ಲಿ ಆಳಿದ ಅರಸರು ಸಾಹಿತ್ಯದ ಆರಾಧಕರಾಗಿದ್ದರು. ಕನ್ನಡ ಸಾಹಿತ್ಯವನ್ನು ಪೋಷಿಸಿ ಬೆಳೆಸಿದರು ಎಂಬುದಕ್ಕೆ ರನ್ನ ಪೊನ್ನ ಜನ್ನರಂಥ ಹೆಸರು ಸಾಕಲ್ಲವೇ? ಇಷ್ಟೆಲ್ಲ ವೈಭವಯುತ ಸಾಹಿತ್ಯದ ಗ್ರಂಥಗಳನ್ನು ತಲೆ ಮೇಲೆ ಹೊತ್ತು ಮಾರಿದ ಕಾದಂಬರಿಯ ಜನಕ ಗಳಗನಾಥರಂಥ ಸಾಹಿತ್ಯ ಪ್ರೇಮಿಗಳು ಕನ್ನಡತನದ ಹಿರಿಮೆಯನ್ನು ಎತ್ತಿ ತೋರಿಸಿದ್ದಾರೆ. ದಾನಕ್ಕೆ ಹೆಸರಾದ ಅತ್ತಿಮಬ್ಬೆ ಪುಸ್ತಕಗಳನ್ನು ದಾನ ಮಾಡಿದ್ದು ಇತಿಹಾಸದ ಪುಟ ಸೇರಿದೆ. .

ಸಾಹಿತ್ಯ ಪಂಡಿತರಿಗಷ್ಟೇ ಅಲ್ಲ ವಿದ್ವಾಂಸರ ಸೊತ್ತಲ್ಲ. ಕಬ್ಬಿಣದ ಕಡಲೆಯೂ ಅಲ್ಲ. ಸಾಮಾನ್ಯ ಜನರ ಜೀವ ನಾಡಿ ಎಂದು ಸಾಕ್ಷೀಕರಿಸಿ ತೋರಿಸಿದವರು ಜಗಜ್ಯೋತಿ ಅಣ್ಣ ಬಸವಣ್ಣನವರು. ವಚನ ಸಾಹಿತ್ಯದಂಥ ಸಾಹಿತ್ಯ ಜಗತ್ತಿನ ಉಳಿದ ಯಾವ ಭಾಷೆಯಲ್ಲೂ ಕಾಣ ಸಿಗುವುದಿಲ್ಲ. ಅಷ್ಟೇ ಅಲ್ಲ ಅರ್ಥಕ್ಕೆ ತಕ್ಕ ಹಾಗೆ ಅದನ್ನು ಅನುವಾದಿಸುವುದು ಅಷ್ಟು ಸುಲಭದ ವಿಷಯವೂ ಅಲ್ಲ. ಛಂದ, ಕಂದ, ಷಟ್ಪದಿ, ರಗಳೆ ಅಲಂಕಾರ ಹೊಂದಿದ ಸಾಹಿತ್ಯ ಕನ್ನಡಿಗರ ಸೃಜನಶೀಲತೆಗೆ ಪ್ರಯೋಗಶೀಲತೆಗೆ ಹಿಡಿದ ಕನ್ನಡಿ. ಇಷ್ಟೆಲ್ಲ ವೈಶಿಷ್ಟತೆಗಳ ಆಗರವಾಗಿರುವ ಸಾಹಿತ್ಯವನ್ನು ಅಸ್ವಾದಿಸುವ ರಚಿಸಿ ಮುನ್ನಡೆಸಿಕೊಂಡು ಹೋಗುವ ಸತ್ಸಂಪ್ರದಾಯ ಕಣ್ಮರೆಯಾಗುತ್ತಿದೆ ಎಂಬ ನೋವು ಕಾಡುತ್ತಿದೆ ಎನ್ನುವುದು ಹಿರಿಯ ಜೀವಿಗಳ ಅಳಲು. ಅಂಗೈಯಲ್ಲಿ ಮೊಬೈಲ್ ಎನ್ನುವ ಮಾಯಾವಿ ಬಂದು ಕುಳಿತ ಮೇಲೆ ಪುಸ್ತಕ ಸಂಸ್ಕೃತಿ ಮಾಯವಾಗುತ್ತಿದೆ ಎನ್ನುವ ಮಾತಿನ ಸದ್ದು ಎಲ್ಲೆಲ್ಲೂ ಹೆಚ್ಚುತ್ತಿದೆ.

ಇತ್ತೀಚಿನ ದಿನ ಮಾನದಲ್ಲಿ ಎಲ್ಲೆಲ್ಲೂ ಸಾಮಾಜಿಕ ಜಾಲತಾಣಗಳದ್ದೇ ಮಾತು. ಇವುಗಳಿಗೆ ಮಾರು ಹೋಗದವರು ತುಂಬಾ ವಿರಳ. ಸಾಮಾಜಿಕ ಜಾಲತಾಣಗಳಾದ ಮಾಯ್ ಸ್ಪೇಸ್, ಟ್ವಿಟರ್, ಫೆಸ್‌ಬುಕ್, ಯೂ ಟ್ಯೂಬ್ ವಾಟ್ಸಪ್‌ಗಳಲ್ಲಿ ನಿರತರಾಗದ ಜನ ಸಿಗುವುದು ನಿಜಕ್ಕೂ ಕಷ್ಟ. ದಿನ ನಿತ್ಯದ ಜೀವನದಲ್ಲಿ ತಮ್ಮ ಆಸಕ್ತಿ ಅಭಿರುಚಿಗಳಿಗೆ ಅನುಗುಣವಾಗಿ ಅಸಂಖ್ಯಾತ ಜನರು ಸಾಮಾಜಿಕ ಜಾಲ ತಾಣಗಳ ಬಳಕೆದಾರರಾಗಿದ್ದಾರೆ. ಇವುಗಳ ಬಳಕೆ ಸಂಚಲನವನ್ನು ಸೃಷ್ಟಿಸಿದೆ. ತಂತ್ರಜ್ಞಾನದ ಅಭಿವೃದ್ಧಿ ಸಾಮಾಜಿಕ ಜಾಲ ತಾಣಗಳಲ್ಲಿ ಸಂಶೋಧನಾ ಕಾರ್ಯಕ್ಕೂ ಮುನ್ನುಡಿ ಬರೆದಂತಾಗಿದೆ. ಸಾಮಾಜಿಕ ಜಾಲ ತಾಣಗಳಲ್ಲಿ ಸಾಮಾನ್ಯವಾಗಿ ಐದು ತೆರನಾದ ಸಾಹಿತ್ಯಕ್ಕೆ ಅರಸುವವರನ್ನು ಕಾಣುತ್ತೇವೆ. ಮಾರುಕಟ್ಟೆ ಮತ್ತು ಜಾಹೀರಾತು, ಜ್ಞಾನ ನಿರ್ವಹಣೆ, ಸಂಬಂಧಗಳ ನಿರ್ವಹಣೆ, ಸಾಮಾಜಿಕ ಬಂಡವಾಳ, ಇಲೆಕ್ಟ್ರಾನಿಕ್ ಮತ್ತು ಕಾಮರ್ಸ್

2012 ರ ಅಧ್ಯಯನದ ಪ್ರಕಾರ ಫೇಸ್ ಬುಕ್ 710 ಮಿಲಿಯನ್ ಬಳಕೆದಾರರನ್ನು ಹೊಂದಿದೆ. ಅಂದರೆ ಈ ಬಳಕೆದಾರರ ಸಂಖ್ಯೆ ಜಗತ್ತಿನ 3 ನೇ ದೊಡ್ಡ ರಾಷ್ಟ್ರದಷ್ಟಿದೆ. ಪ್ರಪಂಚದ ಅತೀ ಹೆಚ್ಚು ಜನಸಂಖ್ಯೆಯುಳ್ಳ ಚೀನಾ ಹಾಗೂ ಭಾರತದ ಶೇ 50 ರಷ್ಟು ಜನಸಂಖ್ಯೆ ಸಾಮಾಜಿಕ ಜಾಲತಾಣಗಳಲ್ಲಿ ತಮ್ಮನ್ನು ಗುರುತಿಸಿಕೊಂಡಿದೆ. ಸಾಮಾಜಿಕ ಜಾಲತಾಣಗಳು ಅದೆಷ್ಟು ಫ್ರಭಾವಕಾರಿಯಾಗಿವೆ ಎಂದರೆ ಅವು ಪರ್ಯಾಯ ಸಂವಹನ ಮಾಧ್ಯಮಗಳಾಗಿ ಕಾರ್ಯ ನಿರ್ವಹಿಸುತ್ತಿವೆ. ಸಾಂಪ್ರದಾಯಿಕ ಪದ್ಧತಿಗಳನ್ನು ಹಿಂದಿಕ್ಕಿ ನಾಗಾಲೋಟದ ಗತಿಯಲ್ಲಿ ಜನರನ್ನು ತಲುಪುತ್ತಿವೆ.

'ಸಾಹಿತ್ಯದ ಗಂಧವಿಲ್ಲದ ಜೀವನ ನರಕವಿದ್ದಂತೆ.'ಎಂಬ ಆಂಗ್ಲ ಕವಿಯ ನುಡಿಯು ಜೀವನದಲ್ಲಿ ಸಾಹಿತ್ಯದ ಮಹತ್ತರ ಪಾತ್ರವನ್ನು ಸಾರಿ ಹೇಳುತ್ತದೆ.ಬದುಕೇ ಬರಹದ ಬುತ್ತಿ ಎನ್ನುವ ಮಾತಿನಂತೆ ಬಾಳಿನಲ್ಲಿ ಕಂಡುಂಡ ಎಲ್ಲ ಅನುಭವಗಳಿಗೂ ಅಕ್ಷರ ರೂಪ ಕೊಟ್ಟು ಅದಕ್ಕೊಪ್ಪುವ ಚಿತ್ರಗಳನ್ನು ಬಳಸಿ ವಿವಿಧ ಜರ್ನಲ್‌ಗಳಿಗೆ ಉಪಯೋಗಿಸಿದ ಅತ್ಯುತ್ತಮ ಲೇಖನ ಮಾಲೆಗಳು ಸಾಮಾಜಿಕ ಜಾಲತಾಣಗಳಲ್ಲಿ ಲಭ್ಯ. ಇಂಥ ಪ್ರಬಂಧಗಳು ಕವಿತೆಗಳು ಕಥೆಗಳು ಸಾಮಾಜಿಕ ಸಾಂಸ್ಕೃತಿಕ ನಡುವಳಿಕೆಯ ಮೇಲೆ ಅಗಾಧ ಪ್ರಭಾವವನ್ನು ಬೀರುತ್ತಿದೆ ಎನ್ನುವುದರಲ್ಲಿ ಎರಡು ಮಾತಿಲ್ಲ. 2008 ರಿಂದ 2010 ರಲ್ಲಿ ನಿಕೋಲಸ್ ಬೆಲರ್ಡ್ಸ್ ಟ್ವಿಟರ್ ಮೂಲಕ ಮೊಟ್ಟ



ಮೊದಲನೆಯ ಬಾರಿಗೆ ಕಾದಂಬರಿಯನ್ನು ಪ್ರಕಟಿಸಿ ಇತಿಹಾಸವನ್ನು ನಿರ್ಮಿಸಿದ. ಸಮಕಾಲೀನ ಖ್ಯಾತ ಕವಿಗಳು ಲೇಖಕರು ಸಾಹಿತಿಗಳು ತಮ್ಮ ಓದುಗ ಅಭಿಮಾನಿಗಳೊಂದಿಗೆ ಬ್ಲಾಗ್‌ನಲ್ಲಿ ಮತ್ತು ಟ್ವಿಟರ್‌ಗಳಲ್ಲಿ



ಪ್ರತಿಸ್ಪಂದಿಸುತ್ತಿದ್ದಾರೆ.


'ಬಿಲ್ಲುಗಾರರ ವಿರೋಧವನ್ನಾದರೂ ಕಟ್ಟಿಕೋ ಆದರೆ ಬರಹಗಾರರ ವಿರೋಧವನ್ನು ಕಟ್ಟಿಕೊಳ್ಳದಿರು.' ಎಂಬ ತಿರುವಳ್ಳವರ್ ನುಡಿಯಂತೆ ಬರಹಗಾರರ ವಿರೋಧವನ್ನು ಕಟ್ಟಿಕೊಂಡರೆ ಸಾಮಾಜಿಕ ಜಾಲ ತಾಣಗಳಲ್ಲಿ ಮಾನ ಹರಾಜಾಗುವುದು ಖಚಿತ. ಪಾಶ್ಚಾತ್ಯ ದೇಶಗಳಲ್ಲಿ ಮಕ್ಕಳು ಪಿ ಬುಕ್ಸ್(ಪ್ರಿಂಟೆಡ್) ಗಳಿಗಿಂತ ಇ ಬುಕ್ಸ್ (ಇಲೆಕ್ಟ್ರಾನಿಕ್) ಗಳನ್ನೇ ಹೆಚ್ಚು ಓದುತ್ತಾರೆ ಎಂಬುದು ಸಮೀಕ್ಷೆಯಿಂದ ಸಾಬೀತಾಗಿದೆ. ನಮ್ಮಲ್ಲಿ ಇನ್ನೂ ಪಿ ಬುಕ್ಸ್ ಗಳ ಬಳಕೆ ಉಳಿದಿರುವುದು ನಮ್ಮ ಸುದೈವ ಎಂದು ಕೊಳ್ಳುತ್ತಿದ್ದೇವೆ. ಬದಲಾವಣೆಗೆ ನಾವು ಸಿದ್ಧರಾಗಬೇಕು ಮತ್ತು ಹೊಂದಿಕೊಳ್ಳಬೇಕು. 'ಪುಸ್ತಕಗಳು ಎಂದು ಮರೆಯಾಗುವುದಿಲ್ಲವೆಂದು ನಾನು ನಂಬಿದ್ದೇನೆ.' ಎಂದು ಆಂಗ್ಲ ಭಾಷೆಯ ಸುಪ್ರಸಿದ್ಧ ಕವಿ ಲೇಖಕ ಜಾರ್ಜ್ ಬೋರ್ಜಿಸ್ ಬಲವಾಗಿ ಹೇಳಿದ್ದಾರೆ. ಬೋರ್ಜಿಸ್ ಮಾತಿಗೆ ಪುಷ್ಟಿ ನೀಡುವಂತೆ ಆಧುನಿಕ ತಂತ್ರಜ್ಞಾನದ ಬೆಳವಣಿಗೆಯಲ್ಲೂ ಮುದ್ರಿತ ಕೃತಿಗಳ ಗ್ರಂಥಗಳ ಸಂಖ್ಯೆ ಕಡಿಮೆಯಾಗುತ್ತಿಲ್ಲ.ಬೋರ್ಜಿಸ್ ಪ್ರಕಾರ ಫೋನ್ ನಮ್ಮ ಧ್ವನಿ ಪೆಟ್ಟಿಗೆಯ ಮುಂದುವರಿದ ಭಾಗ. ಆದರೆ ಈಗ ಮೊಬೈಲ್ ನಮ್ಮ ಸೃಜನಶೀಲತೆಯ ಮುಂದುವರೆದ ಭಾಗವಾಗಿ ಕಾರ್ಯ ನಿರ್ವಹಿಸುತ್ತಿದೆ. ಲಿಟರೇಚರ್ ಈಗ ಟ್ವಿಟರೇಚರ್ ಆಗಿ ಬದಲಾಗಿದೆ ಎಂದು ಮಹಾನ್ ವ್ಯಕ್ತಿಯೊಬ್ಬರು ಟ್ವೀಟ್ ಮಾಡಿದ್ದನ್ನು ಇಲ್ಲಿ ನೆನೆಯಬಹುದು.

ಫೇಸ್ ಬುಕ್ ಯೂ ಟ್ಯೂಬ್ ಗಳಲ್ಲಿ ಹರಿದಾಡುವ ಸಾಹಿತ್ಯ ದಿನ ನಿತ್ಯದ ಜೀವನಾನುಭವಗಳ ಹಂಚಿಕೆಯಾಗಿರುತ್ತದೆ. ಸಾಮಾಜಿಕ ಜಾಲತಾಣಗಳ ಬಹು ದೊಡ್ಡ ಲಾಭವೆಂದರೆ ಇಲ್ಲಿ ಯಾರೂ ಕೂಡ ತಮ್ಮ ಆಸಕ್ತಿ ಅಭಿರುಚಿಗಳನ್ನು ಅಕ್ಷರದಲ್ಲಿ ಹೆಣೆದು ಇತರರೊಂದಿಗೆ ಹಂಚಿಕೊಳ್ಳಬಹುದು. ಹೀಗಾಗಿ ಈಗ ಯಾರು ಬೇಕಾದರೂ ಪುಸ್ತಕಗಳನ್ನು ಬರೆಯಬಹುದು ಎನ್ನುವಂತಾಗಿದೆ. 'ಸಾಹಿತ್ಯದ ಬಗ್ಗೆ ಹೆಚ್ಚಿಗೆ ತಿಳಿದಷ್ಟು ನಮ್ಮ ಬಗ್ಗೆ ನಾವು ಹೆಚ್ಚು ತಿಳಿಯಲು ಸಾಧ್ಯ. ಎನ್ನುವ ಪ್ರಾಜ್ಞರ ಮಾತೊಂದಿದೆ. ಆ ಮಾತಿನಂತೆ ಸಮಕಾಲೀನ ಕವಿಗಳು ಲೇಖಕರು ವಿಮರ್ಶಕರು ತಮ್ಮ ಸಾಹಿತ್ಯವನ್ನು ಸಾಮಾಜಿಕ ಜಾಲ ತಾಣಗಳಿಲ್ಲಿ ಬ್ಲಾಗರ್‌ಗಳ ಮೂಲಕ ಕನ್ನಡ ಪ್ರತಿ ಲಿಪಿ ಮೂಲಕ ಓದುಗರಿಗೆ ನೀಡುವುದಲ್ಲದೇ ಇತರ ಸಾಹಿತಿಗಳ ಕೃತಿಗಳನ್ನು ಓದುತ್ತಿದ್ದಾರೆ. ಫೇಸ್ ಬುಕ್ ವಾಲ್‌ಗಳ ಮೇಲೆ ಕಾಣಿಸುವ ಅನೇಕ ಬರಹಗಳು ಹೈಕುಗಳು, ಕವಿತೆಗಳು, ಹನಿಗವನಗಳು, ಕಾರ್ಟೂನ್‌ಗಳು ನಗೆ ಚಟಾಕಿಗಳು ಹಾಸ್ಯ ಪ್ರಬಂಧಗಳು ಆಧುನಿಕ ಬದುಕಿನ ಒತ್ತಡ ಮತ್ತು ಜಂಜಾಟದ ಅಕ್ಷರ ಚಿತ್ರಗಳನ್ನು ಪ್ರದರ್ಶಿಸುತ್ತವೆ. ಇಂಥ ಸಾಹಿತ್ಯ ಓದುಗರನ್ನು ಕೈ ಬೀಸಿ ಕರೆಯುತ್ತದೆ. ಪ್ರಾಜ್ಞ ಓದುಗರು ವಾಚಿಸಿ ತಮ್ಮ ಅನಿಸಿಕೆಗಳನ್ನು ಪೋಸ್ಟ್ ಮಾಡುತ್ತಾರೆ ಕೆಲವೊಮ್ಮೆ ಉತ್ತರ ರೂಪದಲ್ಲಿ ಬರಹಗಳನ್ನು ಬರೆದು ಪೋಸ್ಟ್ ಮಾಡುತ್ತಾರೆ.

'ಲೋಕೋ ಭಿನ್ನ ರುಚಿಃ.'ಎಂಬಂತೆ ವಿಭಿನ್ನ ಆಶಯಗಳನ್ನಿಟ್ಟುಕೊಂಡು ಹುಟ್ಟುವ ವಾಟ್ಸಪ್ ಗುಂಪುಗಳಲ್ಲಿ ಸಾಹಿತ್ಯವನ್ನೇ ಪ್ರಧಾನವಾಗಿಟ್ಟುಕೊಂಡು ಗುಂಪುಗಳು ಬಹು ಸಂಖ್ಯೆಯಲ್ಲಿ ಸಿಗುತ್ತವೆ. ಇಂಥ ಗುಂಪಿಗಳಲ್ಲಿ ತಾವು ಬರೆದ ಸಾಹಿತ್ಯ ಪ್ರಕಾರಗಳನ್ನು ಹಂಚಿಕೊಳ್ಳುವುದಲ್ಲದೇ ಇತರರ ಬರಹಗಳನ್ನು ಓದಿ ಮೆಚ್ಚುವ ವಿಮರ್ಶಿಸುವ ವಿವೇಕವನ್ನು ಮೆರೆಯುತ್ತಿದ್ದಾರೆ. ಹೀಗೆ ಬರಹಗಾರರಿಗೆ ಬರಹಗಾರರೇ ಸ್ಫೂರ್ತಿಯಾಗುತ್ತಿದ್ದಾರೆ. ಓದುಗರಿಗೂ ಪ್ರೇರಕ ಶಕ್ತಿಯಾಗುತ್ತಿದ್ದಾರೆ.

ಅಂತರ್ಜಾಲ ಸಾಹಿತಿಗಳಾಗಿ ಬ್ಲಾಗರ್‌ಗಳಾಗಿ ಗುರುತಿಸಿಕೊಂಡು ಓದುಗರ ಮನದಲ್ಲಿ ಮನೆ ಮಾಡಿದ ಅನೇಕ ಮಹನೀಯರು ಕನ್ನಡ ಸಾಹಿತ್ಯದ ಘಮವನ್ನು ಪ್ರಪಂಚದಾದ್ಯಂತ ಹರಡುತ್ತಿದ್ದಾರೆ. ಕನ್ನಡ ಸಾಹಿತ್ಯದ ಓದನ್ನೇ ಉದ್ದೇಶವನ್ನಾಗಿಸಿಕೊಂಡು ಹುಟ್ಟಿದ ಗುಂಪುಗಳು ಸಾಹಿತ್ಯದ ಓದಿಗೆ ಹೆಚ್ಚಿನ ಪ್ರಾಶಸ್ತ್ಯ ನೀಡುತ್ತಾರೆ. ಓದುಗರನ್ನು ಮತ್ತಷ್ಟು ಮಗದಷ್ಟು ಇನ್ನಷ್ಟು ಓದಲು ಪ್ರೇರೇಪಿಸುವ ಹಿನ್ನೆಲೆಯಲ್ಲಿ ಬಹು ಆಯ್ಕೆ ಮಾದರಿಯ ರಸ ಪ್ರಶ್ನೆ ಸ್ಪರ್ಧೆಗಳನ್ನು ಏರ್ಪಡಿಸಲಾಗುತ್ತದೆ. ಸ್ಪರ್ಧೆಗಳಲ್ಲಿ ವಿಜಯಿಗಳಾದವರಿಗೆ ಸಾಧಕ ಸಾಹಿತಿಗಳನ್ನು ಕರೆಯಿಸಿ ಕವಿ ಗೋಷ್ಠಿ ಇಲ್ಲವೇ ವಿಚಾರ ಗೋಷ್ಠಿಗಳನ್ನು ಏರ್ಪಡಿಸಿ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುವುದು ಮತ್ತು ಕನ್ನಡ ಸಾಹಿತ್ಯದ ಓದನ್ನು ಪ್ರೋತ್ಸಾಹಿಸಲಾಗುವುದು. ಕೆಲವು ಗುಂಪುಗಳಲ್ಲಿ ಇನ್ನೂ ಒಂದು ಹೆಜ್ಜೆ ಮುಂದಕ್ಕೆ ಹೋಗಿ ವಿವಿಧ ವಿಷಯಗಳ ಕುರಿತು ಅಂಕಣ ಬರಹಗಳಿಗೆ ಆದ್ಯತೆ ನೀಡಲಾಗುತ್ತಿದೆ. ಯುವ ಬರಹಗಾರರು ಬರೆದ ಅಂಕಣಗಳನ್ನು ನುರಿತ ಅನುಭವಿ ಲೇಖಕರು ಓರೆ ಕೋರೆಗಳನ್ನು ತಿದ್ದಿ ತೀಡುತ್ತಾರೆ. ಯುವ ಸಾಹಿತಿಗಳಲ್ಲಿ ವಿಶ್ವಾಸವನ್ನು ಹೆಚ್ಚಿಸುತ್ತಾರೆ. ಭರವಸೆಯ ಅಂಕಣಕಾರರನ್ನು ಹುಟ್ಟು ಹಾಕುತ್ತಾರೆ. ಕಾವ್ಯ ಪ್ರೇಮಿಗಳು ಕವಿ ಬಳಗವನ್ನು ಕಟ್ಟಿಕೊಂಡು ಸುಂದರ ಅರ್ಥ ಪೂರ್ಣ ಕವನಗಳ ಗುಡ್ಡೆ ಹಾಕುವಲ್ಲಿ ನಿರತರಾಗಿದ್ದಾರೆ. ಕಾವ್ಯಾಸಕ್ತರು ಅದನ್ನು ವಾಚಿಸಿ ಕವಿಯ ಆಶಯವನ್ನು ಹೃದಯಾರೆ ಮೆಚ್ಚಿ ಹರಸುತ್ತಾರೆ. ಕಾವ್ಯ ತೀವ್ರತೆಯನ್ನು ಕಳೆದುಕೊಂಡು ಬರಿ ವಾಚ್ಯವೆನಿಸುತ್ತಿದ್ದರೆ ಕವಿಯನ್ನು ಎಚ್ಚರಿಸುವ ಕಾರ್ಯವೂ ಕವಿ ಮಿತ್ರರಿಂದ ನಡೆಯುತ್ತದೆ. ಕಾವ್ಯ ಗರಡಿಯಲ್ಲಿ ಕವನಗಳ ತಾಲೀಮು ನಡೆಸಲು ಕಾವ್ಯ ಬರಹದ ಸ್ಪರ್ಧೆಯನ್ನು ಚಿತ್ರ ಕವನ, ಅಣುಕುವಾಡುಗಳ ಸ್ಪರ್ಧೆಯನ್ನು ಏರ್ಪಡಿಸಲಾಗುತ್ತದೆ. ಆಯ್ಕೆಯಾದ ಗಟ್ಟಿ ಕಾವ್ಯಗಳನ್ನು ಒಗ್ಗೂಡಿಸಿ ಕವನ ಸಂಕಲನಗಳನ್ನು ಲೋಕಾರ್ಪಣೆಗಳಿಸಿ ಓದುಗರ ಕೈಗಿತ್ತ ಉದಾಹರಣೆಗಳು ಇಲ್ಲವೆಂದಿಲ್ಲ.

ಫೇಸ್ ಬುಕ್ ನಲ್ಲಿ ಏಳು ದಿನ ಏಳು ಪುಸ್ತಕ ಎಂಬ ಅಭಿಯಾನ



ಸಂಚಲನ ಮೂಡಿಸಿದ್ದು ಈಗ ಹಳೆಯ ಸುದ್ದಿ. ಬೀಗಬೇಡ ಎಂಬ ಅಭಿಯಾನವೂ ಮಾನವನ ನಶ್ವರತೆಯನ್ನು ಒತ್ತಿ ಹೇಳಿತು. ಗುಂಪಿನ ಸದಸ್ಯರ ಸಮಾಗಮ ಸಂಭ್ರಮಗಳಲ್ಲಿ ಪ್ರಾದೇಶಿಕ ವಿಭಿನ್ನತೆಯನ್ನು ಅಳಿಸಿ ಹಾಕಿ ಒಗ್ಗೂಡುವಿಕೆ ಮತ್ತು ಸಂಯೋಜನೆ ಅಚ್ಚರಿ ಮೂಡಿಸುತ್ತದೆ. ಸಾಹಿತ್ಯವನ್ನು ಇನ್ನಷ್ಟು ಗಟ್ಟಿಗೊಳಿಸುವ ಮತ್ತು ಗಟ್ಟಿ ಸಾಹಿತ್ಯವನ್ನು ಜೀವಂತವಿರಿಸುವ ಮುನ್ನಡೆಸುವ, ಓದುಗರ ಸಂಖ್ಯೆಯನ್ನು ಹೆಚ್ಚಿಸುವ ಕಾರ್ಯಕ್ಕೆ ಈ ಸಾಮಾಜಿಕ ಜಾಲತಾಣಗಳು ಕೈ ಹಾಕಿವೆ. ಅಗ್ಗದ ಸಾಹಿತ್ಯಕ್ಕೆ ಮಾರು ಹೋಗದಂತೆ ಸದಭಿರುಚಿ ಸಾಹಿತ್ಯದಲ್ಲಿ ನೆಲೆಯೂರುವಂತೆ ಎಚ್ಚರಿಸುವ ಕಾರ್ಯ ಮಾಡುತ್ತಿವೆ. ಗುಂಪಿನ ಸಮಾಗಮದಲ್ಲಿ ಸಾಮಿಪ್ಯ ಒಡನಾಟದ ಭಾಗ್ಯ ಒಬ್ಬರನ್ನೊಬ್ಬರು ಅರಿವ ಭಾಗ್ಯ ಕಲ್ಪಿಸಲಾಗುತ್ತಿದೆ. ಆನ್ ಲೈನ್ ಪತ್ರಿಕೆಗಳಂತೂ ಪರಿಚಯವೇ ಇಲ್ಲದ ಸಾಹಿತಿಗಳನ್ನು ಅವರ ಕೃತಿಗಳ ಮೂಲಕ ವಿಶ್ವದಾದ್ಯಂತ ಹರಡಿರುವ ಕನ್ನಡಿಗರಿಗೆ ಗುರುತಿಸುವ ಕೈಂಕರ್ಯದಲ್ಲಿ ತೊಡಗಿಕೊಂಡಿವೆ ಪ್ರಕೃತಿ ಶಿಕ್ಷಣ ನಾಡು ನುಡಿ ಸಾಮಾಜಿಕ ಕಳಕಳಿಯ ಕನ್ನಡ ಸಾಹಿತ್ಯವನ್ನು ಆಳವಾಗಿ ಅರಿಯಲು ನೆರವಾಗುತ್ತಿದೆ. ನಾಡಿನ ನಾನಾ ಭಾಗಗಳಲ್ಲಿನ ವೈವಿಧ್ಯಮಯ ಜೀವನ ತಿಳಿದುಕೊಳ್ಳಲು ಅವಕಾಶ ಒದಗಿಸುತ್ತಿವೆ.. ಹೀಗೆ ಸಾಮಾಜಿಕ ಜಾಲತಾಣಗಳು .ವಿಶ್ವ ಮಟ್ಟದ ಸಾಹಿತ್ಯದಲ್ಲಿ ತಾನೇನೂ ಕಡಿಮೆ ಇಲ್ಲವೆನ್ನುವಂತೆ ಮುನ್ನುಗ್ಗಲು ಸಹಕಾರಿಯಾಗಿವೆ.. ಕನ್ನಡ ಸಾಹಿತ್ಯದ ಮನಸ್ಸುಗಳನ್ನು ಚದುರದಂತೆ ಒಗ್ಗೂಡಿಸುವ ಕಾರ್ಯದಲ್ಲಿ ನಿರತವಾಗಿವೆ ನಾವು ಅಂದುಕೊಂಡಂತೆ .



## ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ರಿಚರ್ಡ್ ವಿನ್ಸೆಂಟ್ ಡಿಸೋಜ್ ಸೂಚನೆ

# ಬರ ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇರುವುದರಿಂದ ಉದ್ಭವಿಸಬಹುದಾದ ಸಮಸ್ಯೆಗಳನ್ನು ಯೋಜನಾಬದ್ಧವಾಗಿ ಹಾಗೂ ವ್ಯವಸ್ಥಿತವಾಗಿ ಯಾವುದೇ ಸಮಸ್ಯೆ ಬಾರದ ರೀತಿಯಲ್ಲಿ ನಿರ್ವಹಿಸುವಂತೆ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಸರ್ಕಾರದ ಕಾರ್ಯದರ್ಶಿಗಳಾದ ವಿಜಯಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ರಿಚರ್ಡ್ ವಿನ್ಸೆಂಟ್ ಡಿಸೋಜ್ ಅಧಿಕಾರಿಗಳಿಗೆ ಸೂಚನೆ ನೀಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಬರ ಪರಿಸ್ಥಿತಿಯಿರುವುದರಿಂದ ಎಲ್ಲ ಅಧಿಕಾರಿಗಳು ಜವಾಬ್ದಾರಿಯಿಂದ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ಯಾವುದೇ ಲೋಪಗಳಿಗೆ ಆಸ್ಪದ ನೀಡದೆ ಶಿಸ್ತುಬದ್ಧ–ಜವಾಬ್ದಾರಿಯಿಂದ ಕಾರ್ಯನಿರ್ವಹಿಸುವ ಮೂಲಕ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಬೇಕು. ಕುಡಿಯುವ ನೀರು, ಉದ್ಯೋಗ ಇತ್ಯಾದಿ ಸಮಸ್ಯೆಗಳು ಉದ್ಭವಿಸದಂತೆ ಪೂರ್ವಸಿದ್ಧತೆಯೊಂದಿಗೆ ಕಾರ್ಯನಿರ್ವಹಿಸಬೇಕು. ಜನರಿಂದ ಬರುವ ಸಮಸ್ಯೆಗಳನ್ನು ಸಮಾಧಾನದಿಂದ ಆಲಿಸಿ, ನಿಮ್ಮ ಹಂತದಲ್ಲಿಯೇ ಪರಿಹಾರ ದೊರಕಿಸಲು ಪ್ರಯತ್ನಿಸಬೇಕು. ಈ ಕುರಿತು ಮೇಲಾಧಿಕಾರಿಗಳಿಗೆ ತತಕ್ಷಣ್ ವರದಿ ಸಲ್ಲಿಸಬೇಕು. ಯಾವುದೇ ನಿರ್ಲಕ್ಷ್ಯ ವಹಿಸಬಾರದು ಎಂದು ಹೇಳಿದರು.

ಇಲಾಖೆ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ, ಜಿಲ್ಲೆಯಲ್ಲಿ ಗುಳೆ ಹೋಗುವುದನ್ನು ತಪ್ಪಿಸಬೇಕು. ಜನರಿಗೆ ಬೇಕಾಗುವ ಉದ್ಯೋಗ ದೊರಕಿಸಿಕೊಡಬೇಕು. ಜಾನುವಾರುಗಳಿಗೆ ಡಿಸೆಂಬರ್ ಅಂತ್ಯದವರೆಗೆ ಮೇವಿನ ಸಮಸ್ಯೆಯಾಗುವುದಿಲ್ಲ. ನಂತರ ದಿನಗಳಲ್ಲಿ ಜಾನುವಾರುಗಳಿಗೆ ಸಾಕಷ್ಟು ಮೇವಿನ ಲಭ್ಯತೆಯನ್ನು ಹೊಂದಲು ಈಗಿನಿಂದಲೇ ಕಾರ್ಯಯೋಜನೆ ಸಿದ್ಧಪಡಿಸಿಕೊಳ್ಳುವಂತೆ ಪಶುಸಂಗೋಪನೆ ಹಾಗೂ ಪಶುವೈದ್ಯ ಅಧಿಕಾರಿಗಳಿಗೆ ಸೂಚಿಸಿದರು.

ನಗರ ಪ್ರದೇಶಗಳಲ್ಲಿ ಸಮರ್ಪಕವಾಗಿ ಕುಡಿಯುವ ನೀರು ಒದಗಿಸಲು ಆದ್ಯತೆ ನೀಡಿ, ನೀರು ಪೂರೈಸಲು ಕ್ರಮ ವಹಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಸಮಸ್ಯೆಯಾಗದಂತೆ ಗ್ರಾಮಾಧಿಕಾರಿಗಳು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕಾರ್ಯಪಡೆ ಸಮಿತಿ ಕಾಲಕಾಲಕ್ಕೆ ಸಭೆಗಳನ್ನು ನಡೆಸಿ, ನೀರಿನ ಸಮಸ್ಯೆಯಾಗಬಹುದಾದ ಗ್ರಾಮ–ವಸತಿ ಪ್ರದೇಶಗಳನ್ನು ಗುರುತಿಸಿಟ್ಟುಕೊಳ್ಳಬೇಕು. ಗಂಭೀರ ಸಮಸ್ಯೆ ಇದ್ದಲ್ಲಿ ಟ್ಯಾಂಕರ್ ಮೂಲಕ ನೀರೊದಗಿಸಬೇಕು. ಖಾಸಗಿ ಕೊಳವೆ ಬಾವಿ, ಹೊಸದಾಗಿ ಕೊಳವೆಬಾವಿ ಕೊರೆಯಿಸಲು ಅಗತ್ಯಾನುಸಾರ ಕ್ರಮ ವಹಿಸಿ, ಕೈಗೊಂಡ ಕ್ರಮದ ಕುರಿತು ವರದಿ ಸಲ್ಲಿಸುವಂತೆ ಸೂಚಿಸಿದ ಅವರು, ಕಲುಷಿತ ನೀರು ಪೂರೈಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ನೀರು ಪರೀಕ್ಷಿಸಿದ ನಂತರ ಪೂರೈಸಲು ಕ್ರಮ ವಹಿಸಬೇಕು ಎಂದು ಅವರು ಹೇಳಿದರು.

ಮಹಾನಗರ ಪಾಲಿಕೆ ವ್ಯಾಪ್ತಿ, ನಗರ ವ್ಯಾಪ್ತಿಯಲ್ಲಿ ಕಸ ವಿಲೇವಾರಿ ಸಮರ್ಪಕವಾಗಿ ವ್ಯವಸ್ಥಿತವಾಗಿ ನಿರ್ವಹಣೆ ಮಾಡಬೇಕು. ಪೌರಕಾರ್ಮಿಕರಿಗೆ ಸಕಾಲದಲ್ಲಿ ವೇತನ ಪಾವತಿಸಬೇಕು. ಪೌರಕಾರ್ಮಿಕರ ಸಮಸ್ಯೆಗಳಿಗೆ ನಿಮ್ಮ ಹಂತದಲ್ಲಿಯೇ ಪರಿಹಾರ ಒದಗಿಸಿ ಘನತ್ಯಾಜ್ಯ ವಿಲೇವಾರಿ ಕ್ರಮ ವಹಿಸಬೇಕು ಎಂದು ಸೂಚಿಸಿದರು.

ತಾಳಿಕೋಟೆ, ಕೊಲ್ಹಾರ, ತಿಕೋಟಾ ಕ್ರೀಡಾಂಗಣಕ್ಕಾಗಿ ಜಾಗ ಗುರುತಿಸಬೇಕು. ಕಂದಾಯ ಇಲಾಖೆಯಿಂದ ಸ್ವಾಧೀನಕ್ಕೆ ಪಡೆದುಕೊಳ್ಳಬೇಕು. ತಾಲೂಕಿನ ಸಮೀಪದಲ್ಲಿರುವ ಸರ್ಕಾರಿ ಜಾಗ ಪಡೆಯಲು ಕ್ರಮ ವಹಿಸಬೇಕು.

ಜಿಲ್ಲೆಯಲ್ಲಿರುವ ಎಲ್ಲ ವಸತಿ ಶಾಲೆ–ನಿಲಯಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ವಸತಿ ಶಾಲೆಗಳಲ್ಲಿ ವಾರ್ಡನಗಳ ಪಾತ್ರ ಅತಿಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ವಾರ್ಡನ್‌ಗಳ ಮೂಲಕ ಪಾಠಬೋಧನೆ ಮಾಡಿಸಿ, ಶೈಕ್ಷಣಿಕ ಗುಣಮಟ್ಟ ಸುಧಾರಿಸಲು ಕ್ರಮ ವಹಿಸಬೇಕು. ಗಣಕಯಂತ್ರ ಜ್ಞಾನ ಹೊಂದಲು ಅವಕಾಸ ಕಲ್ಪಿಸಬೇಕು. ಮಕ್ಕಳಲ್ಲಿ ಗುಣಾತ್ಮಕ ಮತ್ತು ಪರಿಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡಬೇಕು. ಶ್ರಮದಾನ ಸಾಮಾಜಿಕ ಕಾರ್ಯಚಟುವಟಿಕೆ, ಸ್ವಚ್ಛತಾ ಕಾರ್ಯ ಆಯೋಜಿಸುವ ಮೂಲಕ ವಿದ್ಯಾರ್ಥಿಗಳಲ್ಲಿ ಪರಿಸರ ಕಾಳಜಿ ಬೆಳೆಸಬೇಕು. ಗಿಡಗಳನ್ನು ನೆಡುವ ಮೂಲಕ ಅರಣ್ಯೀಕರಣ ಮಹತ್ವದ ಕಾರ್ಯಗಳನ್ನು ನಿರಂತರವಾಗಿ ಕೈಗೊಳ್ಳಬೇಕು. ವಸತಿ ನಿಲಯಗಳಲ್ಲಿ ಸಮರ್ಪಕ ಕುಡಿಯುವ ನೀರು, ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಸೂಚನೆ ನೀಡಿದರು.

ಈಗಾಗಲೇ ಜಿಲ್ಲೆಯಲ್ಲಿ ಆನ್‌ಲೈನ್ ತರಗತಿಗಳನ್ನು ಆರಂಭಿಸಲಾಗಿದೆ. ವಿದ್ಯಾರ್ಥಿಗಳು ಆಸಕ್ತಿಯಿಂದ ಪಾಲ್ಗೊಂಡು ತಮ್ಮ ಶೈಕ್ಷಣಿಕ ಗುಣಮಟ್ಟ ಸುಧಾರಿಸಿಕೊಳ್ಳುತ್ತಿದ್ದಾರೆ. ವಾರಕ್ಕೆರಡು ದಿನ ತರಬೇತಿ ನೀಡಲಾಗುತ್ತಿದೆ. ಸರ್ಕಾರಿ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ಹೊಂದಿರುವ ವಿದ್ಯಾರ್ಥಿಗಳ ಜ್ಞಾನ ಹೆಚ್ಚಿಸಲು ಚೇತನ ಸಂಜೆ ಆನ್‌ಲೈನ್ ಕಾರ್ಯಕ್ರಮ ಮೂಲಕ ವಿಶೇಷ ತರಗತಿಗಳನ್ನು ನಡೆಸಲಾಗುತ್ತಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯ ಎಲ್ಲ ಶಾಲೆಗಳಿಗೆ ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕರು ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಶೈಕ್ಷಣಿಕ ಗುಣಮಟ್ಟ ಹೆಚ್ಚಳಕ್ಕೆ ಕ್ರಮ ವಹಿಸಬೇಕು. ದುರಸ್ತಿ ಇರುವ ಶಾಲೆಗಳನ್ನು ಕೂಡಲೇ ದುರಸ್ತಿಗೆ ಕ್ರಮ ವಹಿಸಿ, ವಿದಾರ್ಥಿಗಳ ಕಲಿಕೆಗೆ ಶಾಲಾ ಕೊಠಡಿಗಳು ಸುಸ್ಥಿತಿಯಲ್ಲಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಿದ ಅವರು, ಸ್ವಂತ ಜಾಗ ಇಲ್ಲದೇ ಇರುವ ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಸೂಕ್ತ ಜಾಗ ಗುರುತಿಸಬೇಕು. ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ತಿಂಗಳಿಗೆ ಕನಿಷ್ಠ 25 ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ಮಹಾನಗರ ಪಾಲಿಕೆ ಆಯುಕ್ತ ಬದ್ರುದ್ದೀನ್ ಸೌದಾಗರ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ಮುಖ್ಯ ಯೋಜನಾಧಿಕಾರಿ ನಿಂಗಪ್ಪ ಗೋಠೆ, ವಿಜಯಪುರ ಉಪವಿಭಾಗಾಧಿಕಾರಿ ಬಸವಣ್ಣೆಪ್ಪ ಕಲಶೆಟ್ಟಿ, ಇಂಡಿ ಉಪವಿಭಾಗಾಧಿಕಾರಿ ಆಬೀದ್ ಗದ್ಯಾಳ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿದ್ಯುತ್ ಮಗ್ಗ ಖರೀದಿಗೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**


ವಿಜಯಪುರ: ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ 2023–24ನೇ ಸಾಲಿಗೆ ಸಾಮಾನ್ಯ ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡದ ಜನರಿಗಾಗಿ ವಿಶೇಷ ಘಟಕ–ಗಿರಿಜನ ಉಪಯೋಜನೆಯಡಿ 3.50ಲಕ್ಷ ರೂ. ಘಟಕಕ್ಕೆ ಶೆ.50–90 ರಷ್ಟು ಸಹಾಯಧನದಲ್ಲಿ 2 ವಿದ್ಯುತ್ ಮಗ್ಗ ಮತ್ತು 400 ಹುಕ್ಕಳ ಜಕಾರ್ಡ್ 24/40 ಕೋಲಿನ ಡಾಬಿ ಖರೀದಿಸಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅರ್ಹರು ಅರ್ಜಿಯನ್ನು ದಿನಾಂಕ : 10–11–2023ರೊಳಗೆ ಸಲ್ಲಿಸಬೇಕು. ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿ.ಪಂ. ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡ, ಶಿಕಾರಖಾನಾ, ಸ್ಟೇಶನ್ ಬ್ಯಾಕ್ ರೋಡ, ವಿಜಯಪುರ ಕಚೇರಿ ಮೊ: 9902561441 ಸಂಖ್ಯೆಗೆ ಸಂಪರ್ಕಿಸುವಂತೆ ಕೈಮಗ್ಗ ಮತ್ತು ಜವಳಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾವ್ಯರಶ್ಮಿ

– ಕಾ ವಿ ರಮೇಶ್ ಕುಮಾರ್

("ನಮ್ಮ ಕಥಾ ಅರಮನೆ" ಬರಹಗಾರರು)



ಉದಯರಶ್ಮಿ ದಿನಪತ್ರಿಕೆ

### ಅರ್ಪಣೆ



ಮಾತು ಮನಸಿನ ಶುಭಮಿಲನ
ಆರಂಭವು ಬದುಕಿನ ನವಜೀವನ
ಹೃದಯಗಳ ಶ್ರುತಿಲಯ ಗಾಯನ
ಸಂಪ್ರೀತ ಭಾವಗಳ ಪ್ರೇಮಬಂಧನ
.
ಸ್ಮರಿಸುತ ದೇವರ ಬಯಸಿ ಕರುಣೆ
ಬೆಸೆದಿಹ ಬೆಸುಗೆಯಲಿ ಆಕರ್ಷಣೆ
ಒಲವಿನಲಿ ತನುಮನಗಳ ಅರ್ಪಣೆ
ವರುಷದ ಹರುಷಕೆ ಹೊಸ ಪ್ರೇರಣೆ

## ಕಲಕೇರಿ: ಟೈಲರ್ ಸಂಘದಿದ ರಾಜ್ಯೋತ್ಸವ ಆಚರಣೆ




**ಉದಯರಶ್ಮಿ ನ್ಯೂಸ್**

ಕಲಕೇರಿ: ಕರ್ನಾಟಕ ಸ್ಟೇಟ್ ಟೈಲರ್ ಅಸೋಸಿಯೇಷನ್ ವಲಯ ಸಮಿತಿ ಕಲಕೇರಿ ಇದರ ಅಡಿಯಲ್ಲಿ ಕಾಯಕ ನಿಧಿ ವಿವಿದೋದ್ದೇಶಗಳ ಸ್ವಸಹಾಯ ಸಂಘದ ವತಿಯಿಂದ ಗ್ರಾಮದ ಶ್ರೀ ಗುರು ಮರುಳಾರಾಧ್ಯ ಹಿರೇಮಠದಲ್ಲಿ ಕಲಕೇರಿಯ ಟೈಲರ್ ಬಂಧುಗಳು ಕೂಡಿಕೊಂಡು ಕರ್ನಾಟಕ ರಾಜ್ಯೋತ್ಸವವನ್ನು ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವುದರೊಂದಿಗೆ ವಿಜೃಂಭಣೆಯಿಂದ ಆಚರಿಸಲಾಯಿತು ಸಂಘದ ಅಧ್ಯಕ್ಷರಾದ ಶಾಂತಯ್ಯ ವೀರಭದ್ರಯ್ಯ ಹಿರೇಮಠ, ಉಪಾಧ್ಯಕ್ಷರಾದ ಮನೋಹರ ಪತ್ತಾರ ಕಾರ್ಯದರ್ಶಿಗಳಾದ ಸುಜಾತ ಎಸ್ ಅವಟಿ ಸಂಘದ ಸದಸ್ಯರುಗಳಾದ ವಿಮಲಾ ಹಿರೇಮಠ, ಸರೋಜಿನಿ ಹಿರೇಮಠ, ರೇಖಾ ಹಿರೇಮಠ, ಶೋಭಾ ಗದ್ದಿಗಿಮಠ, ಪೂಜಾ ಬಡಿಗೇರ, ವಿಜಯಲಕ್ಷ್ಮಿ ಬಡಿಗೇರ, ಸಾವಿತ್ರಿ ಬಡಿಗೇರ, ಕಾಶಿಬಾಯಿ ಬಡಿಗೇರ, ಜಗದೇವಿ ಗಣಾಚಾರಿ, ಶಾಂತಮ್ಮ ಗಣಾಚಾರಿ ಸೇರಿದಂತೆ ಇತರರು ಇದ್ದರು.

# ಕನ್ನಡ ಎನೆ ಕುಣಿದಾಡುವುದೆನ್ನದೆ..



## ಭಾವರಶ್ಮಿ

– ಸುಜಾತಾ ಪ್ರಸಾದ್

("ನಮ್ಮ ಕಥಾ ಅರಮನೆ" ಬರಹಗಾರರು)

ಉದಯರಶ್ಮಿ ದಿನಪತ್ರಿಕೆ

ಸಂಸ್ಕೃತ ಮತ್ತು ಗ್ರೀಕ್ ಭಾಷೆಯ ನಂತರ ವಿಶ್ವದಲ್ಲೇ ನಮ್ಮ ಕನ್ನಡ ಮೂರನೇ ಪುರಾತನ ಭಾಷೆ. ಮೂರು ಸಾವಿರ ವರ್ಷಕ್ಕೂ ಹೆಚ್ಚು ಇತಿಹಾಸವುಳ್ಳ ಭಾಷೆ ನಮ್ಮ ಕನ್ನಡ.

'ಕನ್ನಡ ಎನೆ ಕುಣಿದಾಡುವುದೆನ್ನದೆ, ಕನ್ನಡ ಎನೆ ಕಿವಿ ನಿಮಿರುವುದು' ಎಂದು ರಾಷ್ಟ್ರಕವಿ ಕುವೆಂಪು ಅವರು ಹೇಳಿದ್ದರಲ್ಲಾಗಲಿ, ' ಕನ್ನಡ ಎಂದರೆ ಬರೀ ನುಡಿಯಲ್ಲ ಹಿಂದಿದೆ ಅದರ ಅರ್ಥ,' 'ಜಲವೆಂದರೆ ಕೇವಲ ನೀರಲ್ಲ ಅದು ಪಾವನ ತೀರ್ಥ'.. ಎಂದು ನಿತ್ಯೋತ್ಸವ ಕವಿ ನಿಸಾರ ಅಹಮದ್ ಬರದಿದ್ದರಲ್ಲಾಗಲಿ ಉತ್ಪ್ರೇಕ್ಷೆ ಇಲ್ಲ. ಏಕೆಂದರೆ ಕನ್ನಡ ಭಾಷೆಗಿರುವ ಮಹತ್ವವೇ ಅಂತಹುದು. ಅಮೋಘ ವರ್ಷ 'ಕವಿರಾಜಮಾರ್ಗ' ರಚಿಸುವಾಗ ಇಂಗ್ಲಿಷ್ ಭಾಷೆ ಇನ್ನೂ ತೊಟ್ಟಿಲೊಳಗಿರುವ ಕೂಸಾಗಿ–ತ್ತು, ಹಿಂದಿ ಭಾಷೆ ಹುಟ್ಟಿರಲೇ ಇಲ್ಲವಂತೆ. ವಿಶ್ವದ 'ಲಿಪಿಗಳ ರಾಣಿ ' ಎಂದರೆ ಕನ್ನಡ ಲಿಪಿ ಎಂದು ಶ್ರೀವಿನೋಭಾಭಾವೇಯವರೇ ಹೇಳಿದ್ದರು ಎಂಬುದು ಕನ್ನಡದ ಶ್ರೇಷ್ಠತೆಗೆ ಸಾಕ್ಷಿ..

ನಮ್ಮ ಕರುನಾಡು ಸಿರಿ ನಾಡು, ಇಲ್ಲಿ ಹರಿಯುವ ನದಿಗಳು, ದಟ್ಟ ಅಭಯಾರಣ್ಯಗಳು, ಗುಡಿ ಗೋಪುರಗಳು, ಇತಿಹಾಸ ಸಾರುವ ಶಿಲಾ ಶಾಸನಗಳು, ಶಿಲ್ಪ ಕಲೆಯ ದೇವಾಲಯಗಳು, ಬೆಟ್ಟಗುಡ್ಡಗಳು, ಹಸಿರಾದ ರಮಣೀಯ ಪ್ರಕೃತಿ ಸೌಂದರ್ಯ ದಿಂದ ನಮ್ಮ ನಾಡು ಶ್ರೀಮಂತ ವಾಗಿದೆ. ಇಷ್ಟೇ ಅಲ್ಲದೇ ಸಾಹಿತ್ಯ ಸಾಂಸ್ಕೃತಿಕ ಕ್ಷೇತ್ರ, ಕ್ರೀಡಾ ಕ್ಷೇತ್ರ, ಲಲಿತ ಕಲೆಗಳ ಸುಂದರ ಬೀಡಾಗಿದೆ. ನಾವು ನಮ್ಮ ನೆಲ –ಜಲ, ಭಾಷೆ – ಸಂಸ್ಕೃತಿ ಗಳ ಉಳಿವಿಗಾಗಿ ಶ್ರಮಿಸೋಣ, ಭಾಷೆಯನ್ನು ಬೆಳೆಸೋಣ..

ಒಬ್ಬ ವ್ಯಕ್ತಿ ಪರಿಪೂರ್ಣತೆಯನ್ನು ಪಡೆಯಬೇಕಾದರೆ ಮಾತೃಭಾಷೆಯಿಂದ ಮಾತ್ರ ಸಾಧ್ಯ. ಮಾತೃಭಾಷೆಯನ್ನು ಕಡೆಗಣಿಸಿದ ವ್ಯಕ್ತಿ ಹೆತ್ತ ತಾಯಿಯನ್ನು ಕಡೆಗಣಿಸಿದಂತೆ.

ಮೊದಲನೆಯದಾಗಿ ಕನ್ನಡಿಗರು ನೆರೆಹೊರೆಯವರಲ್ಲಿ, ಹಾಗೂ ಸಭೆ ಸಮಾರಂಭಗಳಲ್ಲಿ ಯಾವುದೇ ಮುಜುಗರಕ್ಕೆ ಒಳಪಡದೆ ಪರಭಾಷಿಗರನ್ನು ಕನ್ನಡದಲ್ಲೇ ಮಾತನಾಡಿಸಬೇಕು ಹಾಗೂ ಕನ್ನಡ ಕಲಿಯಲು ಪ್ರೇರೇಪಿಸಬೇಕು.


ಆಂಗ್ಲ ಭಾಷೆ ಅಥವಾ ಹಿಂದಿ ಭಾಷೆಯನ್ನು ಕಲಿತರೆ ಮಾತ್ರ ಒಳ್ಳೆಯ ಭವಿಷ್ಯ ಎನ್ನುವ ಭಾವನೆಯನ್ನು ಬಿಟ್ಟು , ಪ್ರಾಥಮಿಕ ಶಿಕ್ಷಣವನ್ನು ಕನ್ನಡ ಭಾಷೆಯಲ್ಲಿ ಕಲಿತು, ನಂತರ ಉನ್ನತ ವಿದ್ಯಾಭ್ಯಾಸ ಕೋಸ್ಕರ ಇಂಗ್ಲಿಷ್ ಕಲಿತರೂ ನಮ್ಮ ಮಾತೃ ಭಾಷೆಯನ್ನು ಮರೆಯಬಾರದು. ಪರಭಾಷೆ ನಮಗೆ ಎಷ್ಟು ಅವಶ್ಯವೋ ಅಷ್ಟನ್ನು ಮಾತ್ರ ಬಳಸಬೇಕು ಅದು ಅತಿಯಾಗಬಾರದು. ಕನ್ನಡ ಮಾತನಾಡುವುದು ಸಹ ಜೀವನದಲ್ಲಿ ಯಶಸ್ವಿಗೆ ಕಾರಣವಾಗುತ್ತದೆ ಎಂಬ ಅರಿವನ್ನು ನಾವು ಇತರರಲ್ಲಿ ಮೂಡಿಸಬೇಕು.

ಈಗ ಹಲವರು ಆಂಗ್ಲಭಾಷೆಯಲ್ಲಿ ಮಾತನಾಡುವುದು, ತಾವು ವಿದ್ಯಾವಂತರು ಅಥವಾ ಉತ್ತಮ ಉದ್ಯೋಗದಲ್ಲಿ ಇದ್ದೇವೆ ಎಂದು ತೋರಿಸಿಕೊಳ್ಳುವುದಕ್ಕೋಸ್ಕರ ಆಂಗ್ಲ ಭಾಷೆಯಲ್ಲಿ ಮಾತನಾಡುತ್ತಾರೆ, ಇಂತಹ ಪೊಳ್ಳು ಭಾವನೆಯಿಂದ ಹೊರಬಂದು ಕನ್ನಡವನ್ನು ವಿಶ್ವಾಸದಿಂದ, ಹೆಮ್ಮೆಯಿಂದ ಮಾತನಾಡಬೇಕು.

ಮನೆಗಳಲ್ಲಿ ಮಕ್ಕಳು ನೋಡುವ ಡಿಸ್ಕವರಿ ಚಾನೆಲ್ ಅಥವಾ ಕಾರ್ಟೂನ್ ಮುಂತಾದುಗಳನ್ನು ಕನ್ನಡದಲ್ಲಿ ನೋಡುವಂತಾಗಲು, ಟಿವಿ ಸಿಸ್ಟಮ್ ನಲ್ಲಿ ಕನ್ನಡ ಭಾಷೆಯನ್ನು ಆಯ್ಕೆ ಮಾಡಿ, ಮಕ್ಕಳು ಕಾರ್ಯಕ್ರಮ ವನ್ನು ಕನ್ನಡ ದಲ್ಲೇ ನೋಡುವ ಹಾಗೆ ಮಾಡಬೇಕು. ಮಕ್ಕಳನ್ನು ಆದಷ್ಟು ಕನ್ನಡ ಭಾಷೆಯ ಕಾರ್ಯಕ್ರಮಗಳು, ಕನ್ನಡ ಅಕ್ಷರ ಜಾತ್ರೆ, ಸಾಹಿತ್ಯ ಸಮ್ಮೇಳನ ಇಂತಹ ಕಾರ್ಯಕ್ರಮಗಳಿಗೆ ಕರೆದೊಯ್ದು ಅವರಿಗೆ ಕನ್ನಡದ ಬಗ್ಗೆ ಅಭಿಮಾನ, ಆಸಕ್ತಿ ಹೆಚ್ಚುವಂತೆ ಮಾಡಬೇಕು.

ಬ್ಯಾಂಕ್ ಅಥವಾ ಇನ್ನಿತರ ಸಾರ್ವಜನಿಕ ಸೇವಾ ಕೇಂದ್ರಗಳಲ್ಲಿ ಕನ್ನಡದಲ್ಲಿ ವ್ಯವಹರಿಸುವಂತಾಗಬೇಕು ಹಾಗೂ ಕನ್ನಡ ಪರರೊಂದಿಗೆ ಮಾತ್ರ ನಮ್ಮ ವ್ಯಾಪಾರ ವ್ಯವಹಾರಗಳಿದ್ದರೆ ಆಗ ಮಾತ್ರ ಕನ್ನಡಕ್ಕೆ 'ಆನೆ ಬಲ' ಬಂದಂತಾಗುವುದು.

ಕಸ್ಟಮರ್ ಕೇರ್ ನಲ್ಲಂತೂ ಕನ್ನಡ ಭಾಷೆ ಬಿಟ್ಟು ಬೇರೆ ಭಾಷೆ ಆಯ್ಕೆ ಮಾಡಲೇಬಾರದು ಏಕೆಂದರೆ ಇದರಲ್ಲಿ ಸಿಗುವ ದತಾಂಶಗಳಿಂದಲೇ ಕಂಪನಿಗಳು, ಕನ್ನಡಿಗರ ಮಾರ್ಕೆಟ್, ಅವರಿಗೆ ಸೇವೆ ಒದಗಿಸುವ ಭಾಷೆ, ಕನ್ನಡಿಗರ ಪ್ರೋಗ್ರಾಮ್ಮಿತ್ವವನ್ನು ಲೆಕ್ಕ ಹಾಕುತ್ತಿರುತ್ತದೆ ಆದ್ದರಿಂದ ಇಲ್ಲಿ ಕನ್ನಡ ರಾರಾಜಿಸಲೇಬೇಕು.







ರಾಜ್ಯದ ಪ್ರತಿ ಶಾಲೆಯಲ್ಲೂ ಕನ್ನಡ ಕಲಿಸಲೇಬೇಕು, ಆದಷ್ಟು ಪ್ರಾಥಮಿಕ ಶಿಕ್ಷಣವನ್ನು ಮಾತೃ ಭಾಷೆಯಾದ ಕನ್ನಡದಲ್ಲಿ ಕಲಿಯುವಂತೆ ಪ್ರೇರೇಪಿಸಬೇಕು. ಏಕೆಂದರೆ ಮಾತೃ ಭಾಷೆಯಲ್ಲಿ ಪ್ರಾಥಮಿಕ ಶಿಕ್ಷಣ ಕಲಿತರೆ , ವಿಷಯಗಳ ಬಗ್ಗೆ ಒಳ್ಳೆಯ ಜ್ಞಾನ, ಹಾಗು ಕಲಿಕೆಗೆ ಭದ್ರಬುನಾದಿ ಸಿಗುತ್ತದೆ .

ವಿಜ್ಞಾನ, ತಂತ್ರಜ್ಞಾನಕ್ಕೆ ಸಂಬಂಧಿಸಿದ ಹಾಗೂ ಉನ್ನತ ಶಿಕ್ಷಣಕ್ಕೆ ಸಂಬಂಧಿಸಿದ ಪುಸ್ತಕಗಳು ಕನ್ನಡದಲ್ಲಿ ಸಿಗುವಂತೆ ಮಾಡಬೇಕು.

ಸರ್ಕಾರವು ಕನ್ನಡದಲ್ಲಿ ಪ್ರಾಥಮಿಕ ಶಿಕ್ಷಣ ಕಲಿತವರಿಗೆ ಉನ್ನತ ಶಿಕ್ಷಣದಲ್ಲಿ ಮೀಸಲಾತಿ ಹಾಗೂ ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿ ನೀಡಬೇಕು.

ಕನ್ನಡ ಕಾದಂಬರಿಗಳು ಪತ್ರಿಕೆಗಳು ಹಾಗೂ ಇತರ ಕನ್ನಡ ಪುಸ್ತಕಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳಬೇಕು ಹಾಗೆಯೇ ಆನ್ಲೈನ್ ನಲ್ಲಿ ಓದುವಾಗ ಕನ್ನಡದ ಆವೃತ್ತಿಗೆ ಆದ್ಯತೆ ನೀಡಬೇಕು.

ಕಾರ್ಪೊರೇಟ್ ಕಚೇರಿಗಳಲ್ಲಿ, ಹೆಚ್ಚಿನ ಸಂಖ್ಯೆಯಲ್ಲಿ ಅನ್ಯ ಭಾಷೆಗರು ಕೆಲಸ ಮಾಡುತ್ತಿರುವುದರಿಂದ ಅವರು ತಮ್ಮ ಉದ್ಯೋಗಿಗಳಿಗೆ ಕನ್ನಡವನ್ನು ಕಲಿಸುವ ವ್ಯವಸ್ಥೆ ಮಾಡಬೇಕು.

ನಾವು ನಿರಂತರವಾಗಿ ನಮ್ಮ ಭಾಷೆಯನ್ನು ಹೆಮ್ಮೆಯಿಂದ ಆತ್ಮವಿಶ್ವಾಸದಿಂದ ಬಳಸಿದರೆ ಖಂಡಿತವಾಗಿಯೂ ಅದರ ಬಳಕೆ, ಉಳಿಕೆ ಹೆಚ್ಚಾಗುತ್ತದೆ. ರಾಷ್ಟ್ರಕವಿ ಕುವೆಂಪು ರವರು ಹೇಳಿದ ಹಾಗೆ ' ಎಲ್ಲಾದರೂ ಇರು, ಎಂತಾದರೂ ಇರು ಎಂದೆಂದಿಗೂ ಕನ್ನಡವಾಗಿರು' ಎಂಬಂತೆ, ಯಾವುದೇ ದೇಶದಲ್ಲಿರಲಿ ಕನ್ನಡಿಗರಾಗಿ ನಾವು ಕನ್ನಡ ಮಾತನಾಡೋಣ, ಭಾಷೆಯ ಸೊಗಡನ್ನು ಎಲ್ಲೆಡೆ ಪಸರಿಸೋಣ.

ಕನ್ನಡ ರಾಜ್ಯೋತ್ಸವದ ವೇಳೆಯಲ್ಲಿ ಮಾತ್ರ ನಾವು ಕನ್ನಡ ಭಾಷೆಯ ಬಗ್ಗೆ ಜಾಗೃತವಾಗುವುದನ್ನು ಬಿಟ್ಟು ಪ್ರತಿದಿನ, ಪ್ರತಿಕ್ಷಣವೂ ನಮ್ಮ ಮಾತೃಭಾಷೆಯಾದ ಕನ್ನಡವನ್ನು ಉಳಿಸೋಣ, ಬೆಳೆಸೋಣ.